ಸಂಪುಟ : 11 ಸಂಚಿಕೆ: 133 ಪುಟ : 4+2 ಬೆಲೆ: 3.00 ಶನಿವಾರ ಜೂನ್ 27 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 133 Pages : 4+2 Price : 3.00 Saturday june 27 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ವಿದ್ಯಾರ್ಥಿ ಬಸ್ ಪಾಸ್ ಸೇವೆ ತಾತ್ಕಾಲಿಕ ಸ್ಥಗಿತ

■ವಿಜಯಸಾಕ್ಷಿ ಸುದ್ದಿ, ಗದಗ

ಸೇವಾಸಿಂಧು ಪೋರ್ಟಲ್‌ನಲ್ಲಿ ತಾಂತ್ರಿಕ ನಿರ್ವಹಣಾ ಕಾರ್ಯ ನಡೆಯುತ್ತಿರುವ ಹಿನ್ನೆಲೆಯಲ್ಲಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ (ವಾ.ಕ.ರ.ಸಾ.ಸಂಸ್ಥೆ)ಯ ವಿದ್ಯಾರ್ಥಿ ಬಸ್ ಪಾಸ್ ಅರ್ಜಿ ಸಲ್ಲಿಕೆ ಹಾಗೂ ಅರ್ಜಿ ವಿಲೇವಾರಿ ಸೇವೆಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿದೆ.

ಜೂನ್ 25ರ ಸಂಜೆ 8 ಗಂಟೆಯಿಂದ ಜೂನ್ 26ರ ರಾತ್ರಿ 10 ಗಂಟೆಯವರೆಗೆ ಕರ್ನಾಟಕ ರಾಜ್ಯ ದತ್ತಾಂಶ ಕೇಂದ್ರವು ಸೇವಾಸಿಂಧು ತಂತ್ರಾಂಶದ ನಿರ್ವಹಣಾ ಕಾರ್ಯ ಕೈಗೊಂಡಿರುವುದರಿಂದ ಈ ಅವಧಿಯಲ್ಲಿ ವಿದ್ಯಾರ್ಥಿ ಬಸ್ ಪಾಸ್‌ಗೆ ಅರ್ಜಿ ಸಲ್ಲಿಕೆ ಹಾಗೂ ವಿಲೇವಾರಿ ಸೇವೆ ಲಭ್ಯವಿರುವುದಿಲ್ಲ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಈ ಹಿನ್ನೆಲೆಯಲ್ಲಿ ಸಾರ್ವಜನಿಕರು ಹಾಗೂ ವಿದ್ಯಾರ್ಥಿಗಳು ಸಹಕರಿಸುವಂತೆ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಕೇಂದ್ರ ಕಚೇರಿಯ ಮುಖ್ಯ ಸಂಚಾರ ವ್ಯವಸ್ಥಾಪಕರು ಮನವಿ ಮಾಡಿದ್ದಾರೆ.

## ತುಲಾಭಾರ ತಕ್ಕಡಿ ಸಮರ್ಪಿಸಿದ ವಸಂತ ಪಡಗದ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದ ಭಕ್ತರ ಆರಾಧ್ಯ ದೈವವಾದ ಕೈಲಾಸ ವರಸಿದ್ಧಿ ವಿನಾಯಕ ದೇವಸ್ಥಾನಕ್ಕೆ ಯುವ ಮುಖಂಡ ವಸಂತ ಪಡಗದ ಅವರು ನೂತನ ತುಲಾಭಾರದ ತಕ್ಕಡಿಯನ್ನು ಕೊಡುಗೆಯಾಗಿ ಸಮರ್ಪಿಸಿದರು.

ದೇವಸ್ಥಾನದ ಆವರಣದಲ್ಲಿ ನಡೆದ ಸರಳ ಸಮಾರಂಭದಲ್ಲಿ ಹೂವಿನಿಂದ ಅಲಂಕೃತಗೊಂಡ ತುಲಾಭಾರದ ತಕ್ಕಡಿಯನ್ನು ದೇವಸ್ಥಾನದ ಆಡಳಿತ ಮಂಡಳಿಗೆ ಹಸ್ತಾಂತರಿಸಲಾಯಿತು.

ವಸಂತ ಪಡಗದ ಅವರ ಧಾರ್ಮಿಕ ಸೇವಾ ಕಾರ್ಯವನ್ನು ಮೆಚ್ಚಿದ ದೇವಸ್ಥಾನದ ಪ್ರಮುಖರು ಅವರನ್ನು ಸನ್ಮಾನಿಸಿ ಅಭಿನಂದಿಸಿದರು.

ಈ ಸಂದರ್ಭದಲ್ಲಿ ದೇವಸ್ಥಾನ ಸಮಿತಿಯ ಅಧ್ಯಕ್ಷ ಬಿ. ಪ್ರಸನ್ನಕುಮಾರ, ಕಾರ್ಯದರ್ಶಿ ಯೋಗೀಶ್ ವೊರಾ, ಕೆ. ವೆಂಕಟರಮಣ ಭಟ್, ವ್ಯವಸ್ಥಾಪಕ ರಾಮಚಂದ್ರ ಹೆಗಡೆ, ದೇವಸ್ಥಾನ ಸಮಿತಿಯ ಪದಾಧಿಕಾರಿಗಳು, ಅರ್ಚಕ ವೃಂದ, ಸ್ಥಳೀಯ ಗಣ್ಯರು ಹಾಗೂ ಭಕ್ತರು ಉಪಸ್ಥಿತರಿದ್ದರು.

### ಗದಗ ಜಿಲ್ಲೆಯಾದ್ಯಂತ ಪಾಂಜಾ, ಡೋಲಿಗಳ ಭವ್ಯ ಮೆರವಣಿಗೆ: ಹಿಂದೂ-ಮುಸ್ಲಿಂ ಭಾವೈಕ್ಯತೆಗೆ ಮತ್ತೊಮ್ಮೆ ಸಾಕ್ಷಿಯಾದ ಮೊಹರಂ

# ತ್ಯಾಗದ ನೆನಪು... ಸೌಹಾರ್ದದ ಸಂಭ್ರಮ!

■ವಿಜಯಸಾಕ್ಷಿ ಸುದ್ದಿ, ಗದಗ/ಲಕ್ಷ್ಮೇಶ

ಪ್ರವಾದಿ ಮಹಮ್ಮದ್ ಪೈಗಂಬರ್ ಅವರ ಮೊಮ್ಮಕ್ಕಳಾದ ಹಜರತ್ ಹಸನ್ ಮತ್ತು ಹಜರತ್ ಹುಸೈನ್ ಅವರ ತ್ಯಾಗ, ಬಲಿದಾನ ಹಾಗೂ ನ್ಯಾಯಕ್ಕಾಗಿ ನಡೆದ ಹೋರಾಟವನ್ನು ಸ್ಮರಿಸುವ ಮೊಹರಂ ಹಬ್ಬವನ್ನು ಗದಗ-ಬೆಟಗೇರಿ ಅವಳಿ ನಗರ ಸೇರಿದಂತೆ ಜಿಲ್ಲೆಯಾದ್ಯಂತ ಶುಕ್ರವಾರ ಶ್ರದ್ಧೆ, ಭಕ್ತಿ ಹಾಗೂ ಧಾರ್ಮಿಕ ಸೌಹಾರ್ದದ ವಾತಾವರಣದಲ್ಲಿ ಆಚರಿಸಲಾಯಿತು.

ಜಿಲ್ಲೆಯಾದ್ಯಂತ ಪ್ರತಿಷ್ಠಾಪಿಸಲಾಗಿದ್ದ ಪುಷ್ಪಾಲಂಕೃತ ಪಾಂಜಾಗಳು, ಡೋಲಿಗಳು ಹಾಗೂ ಅಲಾಯಿ ದೇವರುಗಳ ಭವ್ಯ ಮೆರವಣಿಗೆಗಳು ಜನರ ಗಮನ ಸೆಳೆದವು. ಹಬ್ಬದಲ್ಲಿ ಹಿಂದೂ-ಮುಸ್ಲಿಂ ಬಾಂಧವರು ಜಾತಿ-ಧರ್ಮದ ಬೇಧ ಮರೆತು ಒಂದಾಗಿ ಪಾಲ್ಗೊಂಡು ಭಾವೈಕ್ಯತೆಯ ಸಂದೇಶ ಸಾರಿದರು.

ಗದಗ ನಗರದಲ್ಲಿ ಮಾಬುಸುಬಾನಿ ಕಟ್ಟೆ, ಜಾಮಿಯಾ ಮಸೀದಿ, ದಖನಿ ಗಲ್ಲಿ, ಒಕ್ಕಲಗೇರಿ ಓಣಿ, ಖಾನ್‌ತೋಟ, ಮುಕ್ತುಮ್ ಗರಡಿ, ಹಳೇ ಕಚೇರಿ, ಹನುಮಂತ ಗರಡಿ ಸೇರಿದಂತೆ ವಿವಿಧೆಡೆ ಪ್ರತಿಷ್ಠಾಪಿಸಿದ್ದ ಪಾಂಜಾ ದೇವರು ಹಾಗೂ ಡೋಲಿಗಳ ಮೆರವಣಿಗೆಗಳು ಶ್ರದ್ಧಾಭಕ್ತಿಯಿಂದ ನಡೆದವು. ನಗರದ ಕಾಗದಗೇರಿ ಓಣಿಯ ಬಾವಿ ಹಾಗೂ ಮುಕ್ತುಮ್ ಬಾವಡಿಯಲ್ಲಿ ಹತ್ತಾರು ಪವಿತ್ರ ತಾಬೂತ್‌ಗಳು ಸೇರಿ, ಬಳಿಕ ಸಂಪ್ರದಾಯದಂತೆ ಹೊಳೆಗೆ ಕಳುಹಿಸಲಾಯಿತು.

ಲಕ್ಷ್ಮೇಶ್ವರ ಪಟ್ಟಣದಲ್ಲಿ 12 ಮಸೀದಿಗಳ ಪಾಂಜಾಗಳು ಮುಖ್ಯ ಬಜಾರ್ ರಸ್ತೆ, ಸೋಮೇಶ್ವರ ಪಾದಗಟ್ಟಿ, ಪುರಸಭೆ ಮುಂಭಾಗ ಹಾಗೂ ಶಿಗ್ಲಿ ಕ್ರಾಸ್ ಮೂಲಕ ಭೋಟೆ ಲಂಕಾಪತಿ ಮಸೀದಿವರೆಗೆ ಮೆರವಣಿಗೆ ನಡೆಸಿ ನಂತರ ತಮ್ಮ ಮೂಲ ಸ್ಥಳಗಳಿಗೆ ಮರಳಿದವು. ಸಂಜೆ ಸಂಪ್ರದಾಯದಂತೆ ಪಾಂಜಾಗಳನ್ನು ಹೊಳೆಗೆ ಕೊಂಡೊಯ್ಯಲಾಯಿತು.

ಶಿಗ್ಲಿ, ರಾಮಗೇರಿ, ಸೂರಣಗಿ, ಬಾಲೆಹೊಸೂರ, ಹುಲ್ಲೂರು, ಬಟ್ಟೂರು, ಬಡ್ನಿ, ಯಳವತ್ತಿ, ಗೊಜನೂರು, ಮಂಜಲಾಪುರ ಸೇರಿದಂತೆ ಅನೇಕ ಗ್ರಾಮಗಳಲ್ಲಿಯೂ ಮೊಹರಂ ಆಚರಣೆ ವಿಜೃಂಭಣೆಯಿಂದ ನಡೆಯಿತು. ವಿಶೇಷವೆಂದರೆ ಮುಸ್ಲಿಂ ಕುಟುಂಬಗಳೇ ಇಲ್ಲದ ಅಡರಕಟ್ಟಿ ಹಾಗೂ ಒಡೆಯರ ಮಲ್ಲಾಪುರ ಗ್ರಾಮಗಳಲ್ಲಿಯೂ ಸಂಪ್ರದಾಯದಂತೆ ಮೊಹರಂ ಆಚರಿಸಿ ಧಾರ್ಮಿಕ ಸೌಹಾರ್ದಕ್ಕೆ ಮತ್ತೊಮ್ಮೆ ಸಾಕ್ಷಿಯಾದವು.

ಹುಲಿವೇಷ, ಫಕೀರರ ವೇಷ, ಅಳ್ಳೊಳ್ಳಿ ಬಾವಾಗಳ ವೇಷಧಾರಿಗಳು, ಅಲಾಯಿ ಕುಣಿತ, ಹೆಜ್ಜೆ ಮೇಳ, ಶಸ್ತ್ರಸೇವೆ, ಬಾರಕೋಲು ಸೇವೆ, ಕೆಂಡ ಹಾಯುವುದು ಸೇರಿದಂತೆ ವಿವಿಧ ಸಾಂಪ್ರದಾಯಿಕ ಆಚರಣೆಗಳು ಹಬ್ಬದ ಮೆರುಗನ್ನು ಹೆಚ್ಚಿಸಿದವು. ಹರಕೆ ಹೊತ್ತಿದ್ದ ಹಿಂದೂ ಹಾಗೂ ಮುಸ್ಲಿಂ ಭಕ್ತರು ಪಾಂಜಾ ದೇವರಿಗೆ ಸಕ್ಕರೆ ಓದು ಹಾಕಿಸಿ ತಮ್ಮ ಭಕ್ತಿಯನ್ನು ಸಮರ್ಪಿಸಿದರು.

ಕಳೆದ ಐದು ದಿನಗಳಿಂದ ಹಜರತ್ ಹಸನ್-ಹುಸೈನ್ ಅವರ ತ್ಯಾಗವನ್ನು ಸ್ಮರಿಸಿ ಧಾರ್ಮಿಕ ಕಾರ್ಯಕ್ರಮಗಳು, ಪ್ರಾರ್ಥನೆ ಹಾಗೂ ಶೋಕಾಚರಣೆಗಳು ನಡೆದವು. ಗದಗದ ಇರಾನಿ ಕಾಲೋನಿಯ ಶಿಯಾ ಮುಸ್ಲಿಂ ಸಮುದಾಯದವರು ಕರ್ಬಲಾ ಘಟನೆಯನ್ನು ಸ್ಮರಿಸಿ ಸಂಪ್ರದಾಯದಂತೆ ಮಾತಂ (ಎದೆ ಬಡಿದುಕೊಂಡು ಶೋಕ ವ್ಯಕ್ತಪಡಿಸುವುದು) ಆಚರಿಸಿ ಶೋಕ ಮೆರವಣಿಗೆ ನಡೆಸಿದರು. ಶೋಕಗೀತೆಗಳ ನಡುವೆ ಕಣ್ಣೀರು ಸುರಿಸುತ್ತ ಭಕ್ತರು ತ್ಯಾಗದ ಸಂದೇಶವನ್ನು ಸ್ಮರಿಸಿದರು.



### ತ್ಯಾಗದ ಸಂಕೇತ ಮೊಹರಂ

ಮೊಹರಂ ಹಬ್ಬವು ಕೇವಲ ಒಂದು ಧಾರ್ಮಿಕ ಆಚರಣೆಯಲ್ಲ, ಅನ್ಯಾಯದ ವಿರುದ್ಧದ ಹೋರಾಟ, ಸತ್ಯಕ್ಕಾಗಿ ಪ್ರಾಣ ತ್ಯಾಗ ಮಾಡಿದ ಹಜರತ್ ಹಸನ್ ಮತ್ತು ಹಜರತ್ ಹುಸೈನ್ ಅವರ ಆದರ್ಶವನ್ನು ನೆನಪಿಸುವ ಪವಿತ್ರ ಹಬ್ಬವಾಗಿದೆ. ಈ ಹಬ್ಬವು ವರ್ಷದಿಂದ ವರ್ಷಕ್ಕೆ ಗದಗ ಜಿಲ್ಲೆಯಲ್ಲಿ ಹಿಂದೂ-ಮುಸ್ಲಿಂ ಸೌಹಾರ್ದದ ಜೀವಂತ ಸಂಕೇತವಾಗಿ ಆಚರಿಸಲ್ಪಡುತ್ತಿದ್ದು, ಧರ್ಮಕ್ಕಿಂತ ಮಾನವೀಯತೆಯೇ ಶ್ರೇಷ್ಠ ಎಂಬ ಸಂದೇಶವನ್ನು ಸಮಾಜಕ್ಕೆ ಸಾರುತ್ತಿದೆ.

### ಬರಗಾಲದ ನಡುವೆ ಮಂಕಾದ ಸಂಭ್ರಮ

ಈ ಬಾರಿ ಬರಗಾಲ ಹಾಗೂ ಕೃಷಿ ಸಂಕಷ್ಟದ ಪರಿಣಾಮ ಮೊಹರಂ ಹಬ್ಬದ ಸಂಭ್ರಮದ ಮೇಲೂ ಕಂಡುಬಂದಿತು. ಹಿಂದಿನ ವರ್ಷಗಳಂತೆ ರಾತ್ರಿಯಿಡೀ ಹೆಜ್ಜೆ ಮೇಳ, ಹಾಡು, ನೃತ್ಯ ಹಾಗೂ ಜನಸಾಗರ ಕಾಣಿಸದಿದ್ದರೂ, "ಸಂಪ್ರದಾಯ ಬಿಡಬಾರದು" ಎಂಬ ಭಾವನೆಯೊಂದಿಗೆ ಭಕ್ತರು ಎಲ್ಲ ಧಾರ್ಮಿಕ ವಿಧಿವಿಧಾನಗಳನ್ನು ಶ್ರದ್ಧಾಭಕ್ತಿಯಿಂದ ನೆರವೇರಿಸಿದರು. ಕೃಷಿಯನ್ನೇ ಜೀವನವಾಗಿಸಿಕೊಂಡಿರುವ ಅನೇಕ ಕುಟುಂಬಗಳಲ್ಲಿ ಸಂಕಷ್ಟದ ಛಾಯೆ ಕಂಡರೂ, ಭಕ್ತಿ ಮತ್ತು ಭಾವೈಕ್ಯ ಮಾತ್ರ ಮಂಕಾಗಲಿಲ್ಲ.

### ರಾಜು ಖಾನಪ್ಪನವರ ಆರೋಪಕ್ಕೆ ದಿ. ಕೆ.ಎಚ್. ಪಾಟೀಲ ಅಭಿಮಾನಿ ಬಳಗದ ತಿರುಗೇಟು

# ಪುಟ್ಟರಾಜ ಅಜ್ಜನವರ ಸೇವೆಯಲ್ಲಿ ಜಾತಿ, ರಾಜಕೀಯ ತರಬೇಡಿ

■ವಿಜಯಸಾಕ್ಷಿ ಸುದ್ದಿ, ಗದಗ

ವೀರೇಶ್ವರ ಪುಣ್ಯಾಶ್ರಮದಲ್ಲಿ ಕಳೆದ 11 ವರ್ಷಗಳಿಂದ ಯಾವುದೇ ದೇಣಿಗೆ ಪಡೆಯದೆ ಉಚಿತ ಸಾಮೂಹಿಕ ವಿವಾಹ ಸೇರಿದಂತೆ ವಿವಿಧ ಸೇವಾ ಕಾರ್ಯಕ್ರಮಗಳನ್ನು ನಡೆಸಿಕೊಂಡು ಬರುತ್ತಿದ್ದು, ಪುಟ್ಟರಾಜ ಅಜ್ಜನವರ ಸೇವೆಯಲ್ಲಿ ಜಾತಿ ಅಥವಾ ರಾಜಕೀಯ ಬೆರೆಸಬಾರದು ಎಂದು ದಿ. ಕೆ.ಎಚ್. ಪಾಟೀಲ ಅಭಿಮಾನಿ ಬಳಗದ ಉಪಾಧ್ಯಕ್ಷ ರಮೇಶ ಮುಳಗುಂದ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಶುಕ್ರವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹಿಂದೂ ಮುಖಂಡ ರಾಜು ಖಾನಪ್ಪನವರ ಮಾಡಿರುವ ಆರೋಪಗಳಿಗೆ ತಿರುಗೇಟು ನೀಡಿದರು.

"ಸಾಮೂಹಿಕ ವಿವಾಹಕ್ಕಾಗಿ ಯಾರಿಂದಲೂ ಒಂದು ರೂಪಾಯಿ ದೇಣಿಗೆ ಪಡೆದಿಲ್ಲ. ಕಾರ್ಯಕ್ರಮದ ಸಂಪೂರ್ಣ ವೆಚ್ಚವನ್ನು ಸಮಾಜಸೇವಕ ಪೀರಸಾಬ್ ಕೌತಾಳ ಭರಿಸುತ್ತಿದ್ದಾರೆ. ವಧು-ವರರಿಗೆ ಅಗತ್ಯ ವಸ್ತುಗಳನ್ನೂ ಉಚಿತವಾಗಿ ನೀಡಲಾಗುತ್ತಿದೆ. ನಾವು ತನು-ಮನ-ಧನದಿಂದ ಸೇವೆ ಮಾಡುತ್ತಿದ್ದೇವೆ. ದೇಣಿಗೆ ಪಡೆದಿದ್ದೇವೆ ಎಂಬುದಕ್ಕೆ ದಾಖಲೆಗಳಿದ್ದರೆ ಬಹಿರಂಗಪಡಿಸಲಿ" ಎಂದು ಸವಾಲು ಹಾಕಿದರು.

ಪುಟ್ಟರಾಜ ಗವಾಯಿಗಳು ಹಾಗೂ ಪಂಚಾಕ್ಷರಿ ಅಜ್ಜನವರ ಪುಣ್ಯಭೂಮಿಯಾದ ವೀರೇಶ್ವರ ಪುಣ್ಯಾಶ್ರಮದಲ್ಲಿ ಕೋಮು ಸಾಮರಸ್ಯಕ್ಕೆ ಧಕ್ಕೆ ತರುವಂತಹ ಹೇಳಿಕೆಗಳು ಸೂಕ್ತವಲ್ಲ. ಹಿಂದೂ ಧರ್ಮವೇ ಎಲ್ಲರನ್ನು ಸಮಾನವಾಗಿ ಕಾಣುವ ಸಂದೇಶ ನೀಡುತ್ತದೆ. ಹೀಗಿರುವಾಗ ಮಠದ ಸೇವಾ ಕಾರ್ಯಗಳ ಬಗ್ಗೆ ಅನಗತ್ಯ ವಿವಾದ ಸೃಷ್ಟಿಸುವುದು ಸರಿಯಲ್ಲ ಎಂದು ಹೇಳಿದರು.

ರಾಜು ಖಾನಪ್ಪನವರು ಮೊದಲು ಹಿಂದೂ ಧರ್ಮದ ತತ್ವಗಳನ್ನು ಅಧ್ಯಯನ ಮಾಡಬೇಕು. ಪ್ರತಿ ವರ್ಷ ಜಾತ್ರಾ ಮಹೋತ್ಸವದ ಅಂಗವಾಗಿ ರಸಮಂಜರಿ ಸೇರಿದಂತೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸುತ್ತಿದ್ದೇವೆ. ಅವರು ಕೂಡ ಕಾರ್ಯಕ್ರಮಗಳಿಗೆ ಬಂದು ವಾಸ್ತವ ಅರಿಯಲಿ ಎಂದು ಹೇಳಿದರು.

ಬಳಗದ ಸದಸ್ಯ ವಿನೋದ್ ಸಿದ್ಲಿಂಗ್ ಮಾತನಾಡಿ, ಪುಟ್ಟರಾಜ ಅಜ್ಜನವರ ಜಯಂತಿ ಸೇರಿದಂತೆ ವಿವಿಧ ಧಾರ್ಮಿಕ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಸಮಾಜದಲ್ಲಿ ಸಾಮರಸ್ಯ ಬೆಳೆಸುವ ಉದ್ದೇಶದಿಂದ ನಡೆಸಲಾಗುತ್ತಿದೆ. ಮಠದಲ್ಲಿ ಯಾವುದೇ ಜಾತಿ, ಧರ್ಮದ ಭೇದವಿಲ್ಲ. ಎಲ್ಲ ಸಮುದಾಯದ ಭಕ್ತರು ಸೇವೆ ಸಲ್ಲಿಸುತ್ತಿದ್ದಾರೆ ಎಂದು ಹೇಳಿದರು.

ಪೀರಸಾಬ್ ಕೌತಾಳ ಅವರು ನಗರಸಭೆಯ ಮೂಲಕ ಶ್ರೀಮಠಕ್ಕೆ ಕುಡಿಯುವ ನೀರಿನ ವ್ಯವಸ್ಥೆ, ಹೈಮಾಸ್ಟ್ ದೀಪ ಸೇರಿದಂತೆ ಹಲವು ಅಭಿವೃದ್ಧಿ ಕಾಮಗಾರಿಗಳನ್ನು ಮಾಡಿಸಿದ್ದು, ಜಾತ್ರಾ ಮಹೋತ್ಸವ ಯಶಸ್ವಿಯಾಗಲು ತನು-ಮನ-ಧನದಿಂದ ಸೇವೆ ಸಲ್ಲಿಸುತ್ತಿದ್ದಾರೆ. ಅವರ ಸೇವೆಯನ್ನು ಪ್ರಶ್ನಿಸುವುದು ಸರಿಯಲ್ಲ ಎಂದರು.

ಸುದ್ದಿಗೋಷ್ಠಿಯಲ್ಲಿ ಚಂದ್ರು ಕಡಕೋಳ, ಅನಿಲ್ ಶಿಂಗಟಾಲಕೇರಿ, ಹನುಮಂತಪ್ಪ ಆಸಂಗಿ, ದಾವಲ ಇರಕಲ್, ಅಜರುದ್ದೀನ್ ಮೂಲಿಮನಿ ಹಾಗೂ ರಜಾಕ್ ಸೂಡಿ ಉಪಸ್ಥಿತರಿದ್ದರು.




> "ಕಳೆದ 11 ವರ್ಷಗಳಿಂದ ವೀರೇಶ್ವರ ಪುಣ್ಯಾಶ್ರಮದಲ್ಲಿ ಯಾರಿಂದಲೂ ಒಂದು ರೂಪಾಯಿ ದೇಣಿಗೆ ಪಡೆಯದೇ ಸಾಮೂಹಿಕ ವಿವಾಹ ಸೇರಿದಂತೆ ಸೇವಾ ಕಾರ್ಯಕ್ರಮಗಳನ್ನು ನಡೆಸುತ್ತಿದ್ದೇವೆ. ದೇಣಿಗೆ ಪಡೆದಿದ್ದೇವೆ ಎಂಬುದಕ್ಕೆ ದಾಖಲೆಗಳಿದ್ದರೆ ಬಹಿರಂಗಪಡಿಸಲಿ."
>
> **– ರಮೇಶ ಮುಳಗುಂದ,**
> ಉಪಾಧ್ಯಕ್ಷರು, ದಿ. ಕೆ.ಎಚ್. ಪಾಟೀಲ ಅಭಿಮಾನಿ ಬಳಗ

### ಶಿರಹಟ್ಟಿ ತಾಲೂಕಿನಾದ್ಯಂತ ಹಿಂದೂ-ಮುಸ್ಲಿಂ ಬಾಂಧವರಿಂದ ಆಚರಣೆ

# ಭಾವೈಕ್ಯತೆಯ ಸಂದೇಶ ಸಾರಿದ ಮೊಹರಂ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ


ತ್ಯಾಗ, ಬಲಿದಾನ ಹಾಗೂ ಧಾರ್ಮಿಕ ಸೌಹಾರ್ದದ ಸಂಕೇತವಾದ ಮೊಹರಂ ಹಬ್ಬವನ್ನು ಶುಕ್ರವಾರ ಶಿರಹಟ್ಟಿ ಪಟ್ಟಣ ಸೇರಿದಂತೆ ತಾಲೂಕಿನ ವಿವಿಧ ಗ್ರಾಮಗಳಲ್ಲಿ ಹಿಂದೂ-ಮುಸ್ಲಿಂ ಬಾಂಧವರು ಶ್ರದ್ಧೆ, ಭಕ್ತಿ ಮತ್ತು ಭಾವೈಕ್ಯತೆಯಿಂದ ಆಚರಿಸಿದರು.

ಹಬ್ಬದ ಅಂಗವಾಗಿ ಪ್ರತಿಷ್ಠಾಪಿಸಲಾದ ಆಲೇ ದೇವರುಗಳು, ಪಾಂಜಾಗಳು ಹಾಗೂ ಡೋಲಿಗಳ ಮೆರವಣಿಗೆಗಳು ಭಕ್ತರ ಗಮನ ಸೆಳೆದವು. ಹೆಜ್ಜೆ ಮೇಳ, ಹರಕೆ ಸೇವೆ, ಅಗ್ನಿ ತುಳಿಯುವುದು ಸೇರಿದಂತೆ ವಿವಿಧ ಧಾರ್ಮಿಕ ಆಚರಣೆಗಳು ಶ್ರದ್ಧಾಭಕ್ತಿಯಿಂದ ನಡೆದವು. ಹರಕೆ ಹೊತ್ತ ಭಕ್ತರು ದೇವರಿಗೆ ಪ್ರಾರ್ಥನೆ ಸಲ್ಲಿಸಿ ತಮ್ಮ ಭಕ್ತಿಯನ್ನು ಸಮರ್ಪಿಸಿದರು.

ಮುಸ್ಲಿಂ ಸಮುದಾಯದ ಭಕ್ತರು ಸಂಪ್ರದಾಯದಂತೆ ಕೆಂಡ ಹಾಯುವ ಸೇವೆ ನೆರವೇರಿಸಿದರೆ, ಹಿಂದೂ ಸಮುದಾಯದ ಭಕ್ತರು ಸಹ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಪೂಜೆ ಸಲ್ಲಿಸಿ ಮೊಹರಂ ಹಬ್ಬದ ಪ್ರತಿಯೊಂದು ಆಚರಣೆಯಲ್ಲೂ ಭಾಗವಹಿಸುವ ಮೂಲಕ ಕೋಮು ಸೌಹಾರ್ದದ ಸಂದೇಶ ಸಾರಿದರು.

ತಾಲೂಕಿನ ಮಾಚೇನಹಳ್ಳಿ ಹಾಗೂ ಪರಸಾಪೂರ ಗ್ರಾಮಗಳಲ್ಲಿ ಮುಸ್ಲಿಂ ಕುಟುಂಬಗಳೇ ಇಲ್ಲದಿದ್ದರೂ, ಹಲವು ವರ್ಷಗಳಿಂದ ಹಿಂದೂ ಸಮುದಾಯದವರು ಸಂಪ್ರದಾಯಬದ್ಧವಾಗಿ ಮೊಹರಂ ಆಚರಿಸಿಕೊಂಡು ಬರುತ್ತಿರುವುದು ವಿಶೇಷವಾಗಿತ್ತು. ಹರಕೆ ಹೊತ್ತ ಭಕ್ತರು ಅಗ್ನಿ ತುಳಿದು ತಮ್ಮ ಭಕ್ತಿಭಾವ ವ್ಯಕ್ತಪಡಿಸಿದರು.

ಮೊಹರಂ ಹಬ್ಬದ ಆಚರಣೆ ಶಿರಹಟ್ಟಿ ತಾಲೂಕಿನಾದ್ಯಂತ ಧರ್ಮಕ್ಕಿಂತ ಮಾನವೀಯತೆ ದೊಡ್ಡದು ಎಂಬ ಸಂದೇಶ ಸಾರುವ ಮೂಲಕ ಹಿಂದೂ-ಮುಸ್ಲಿಂ ಭಾವೈಕ್ಯತೆಗೆ ಮತ್ತೊಮ್ಮೆ ಸಾಕ್ಷಿಯಾಯಿತು.



### ಮೊಹರಂ ಕಾರಣಿಕದಲ್ಲಿ ಮೊಳಗಿದ ವರ್ಷದ ನುಡಿ

# "ಮಳೆ ಬೆಳೆ ಕಷ್ಟದಿಂದ ಸಂಪಾಯಿತಲೇ ಸಂತೋಷದ ದಿನ್" ಎಂದು ಕಾರಣಿಕ ನುಡಿದ ಸೇವಕ

■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ತಾಲೂಕಿನ ಹಂಪಾಪಟ್ಟಣ ಗ್ರಾಮದಲ್ಲಿ ಐತಿಹಾಸಿಕ ಹಿನ್ನೆಲೆಯೊಂದಿಗೆ ಆಚರಿಸಲಾಗುವ ಮೊಹರಂ ಹಬ್ಬದ ಅಂಗವಾಗಿ ನಡೆದ ಕಾರಣಿಕೋತ್ಸವದಲ್ಲಿ ಈ ವರ್ಷದ ಕಾರಣಿಕ ನುಡಿ ಮೊಳಗಿತು. ಗ್ರಾಮದ ಶ್ರೀ ಚೌಡದಾಪುರ ಸ್ವಾಮಿಯ ಸೇವಕ ಬಿಲ್ಲನ್ನೇರಿ, "ಮಳೆ ಬೆಳೆ ಕಷ್ಟದಿಂದ ಸಂಪಾಯಿತಲೇ ಸಂತೋಷದ ದಿನ್" ಎಂದು 2026ನೇ ಸಾಲಿನ ಕಾರಣಿಕ ನುಡಿಯನ್ನು ಘೋಷಿಸಿದರು.

ಕಾರಣಿಕೋತ್ಸವಕ್ಕೂ ಮುನ್ನ ಗಂಗೆ ಪೂಜೆ, ನೀರಿನಲ್ಲಿ ದೀಪ ಹಚ್ಚುವುದು, ಅರಿಕೆಯ ಸಕ್ಕರೆ ದಾನ, ಪಟಾಕ್ಷಿಯ ಹರಾಜು, ಸ್ವಾಮಿಯ ಕಿಚ್ಚು ಹಾಯಿಸುವುದು, ಕಾರಣಿಕ ನುಡಿಯುವುದು ಹಾಗೂ ಹುಡಿ ತುಂಬುವ ಸಂಪ್ರದಾಯಗಳು ಶ್ರದ್ಧಾಭಕ್ತಿಯಿಂದ ನೆರವೇರಿದವು. ಬಳಿಕ ಶ್ರೀ ಸ್ವಾಮಿಯ ಅಲಾಯಿ ಕುಣಿತವೂ ಗಮನ ಸೆಳೆಯಿತು.



ಮೊಹರಂ ಹಬ್ಬದ ಪ್ರಯುಕ್ತ ರಾತ್ರಿ 12 ಗಂಟೆಯಿಂದ ಬೆಳಿಗ್ಗೆ 4 ಗಂಟೆಯವರೆಗೆ ರಿವಾಯತ್ ಜಾನಪದ ಕಲಾವಿದ ಬಡೇಸಾಬ್ ತಂಡ ತ್ಯಾಗ, ವೀರತೆ ಹಾಗೂ ಬಲಿದಾನದ ಸಂದೇಶ ಸಾರುವ ರಿವಾಯತ್ ಸವಾಲ್ ಪದಗಳನ್ನು ಹಾಡಿ ನೆರೆದಿದ್ದ ಭಕ್ತರನ್ನು ರಂಜಿಸಿತು.

ಕಾರ್ಯಕ್ರಮದಲ್ಲಿ ಹಂಪಾಪಟ್ಟಣ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ಸಾವಿರಾರು ಭಕ್ತರು ಭಾಗವಹಿಸಿ ಧಾರ್ಮಿಕ ಕಾರ್ಯಕ್ರಮಗಳಿಗೆ ಸಾಕ್ಷಿಯಾದರು.

**ಕನ್ನಡ ಅಸ್ಮಿತೆಗೆ ಧಕ್ಕೆ, ಎನ್‌ಇಪಿ ಹೇರಿಕೆಯ ಭಾಗ ಎಂದು ಎಐಡಿಎಸ್‌ಓ ಆರೋಪ**

# 6ನೇ ತರಗತಿ ಕನ್ನಡ ಪುಸ್ತಕಕ್ಕೆ ವಿರೋಧ

■ ವಿಜಯಸಾಕ್ಷಿ ಸುದ್ದಿ, ಗದಗ



ಕೇಂದ್ರ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ಮಂಡಳಿ (ಎನ್‌ಸಿಇಆರ್‌ಟಿ) ಸಿಬಿಎಸ್‌ಇ 6ನೇ ತರಗತಿಗಾಗಿ ಪ್ರಕಟಿಸಿರುವ ಕನ್ನಡ ಪಠ್ಯಪುಸ್ತಕವನ್ನು ಕೂಡಲೇ ಹಿಂಪಡೆಯಬೇಕು ಎಂದು ಎಐಡಿಎಸ್‌ಓ ಗದಗ ಜಿಲ್ಲಾ ಘಟಕ ಆಗ್ರಹಿಸಿದೆ.

ಈ ಕುರಿತು ಜಿಲ್ಲಾ ಸಂಚಾಲಕಿ ಎಂ. ಶಾಂತಿ ಪ್ರಕಟಣೆ ನೀಡಿ, 'ಕೃಷ್ಣ' ಹೆಸರಿನ ಈ ಪಠ್ಯಪುಸ್ತಕದಲ್ಲಿ ಕನ್ನಡದ ವೈಚಾರಿಕ, ಸಾಹಿತ್ಯ ಹಾಗೂ ಸಾಂಸ್ಕೃತಿಕ ಪರಂಪರೆಯನ್ನು ಕಡೆಗಣಿಸಲಾಗಿದೆ ಎಂದು ಆರೋಪಿಸಿದ್ದಾರೆ. ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ಇಲಾಖೆಯ ಪಠ್ಯಪುಸ್ತಕಗಳಿದ್ದರೂ ಅವುಗಳನ್ನು ಪರಿಗಣಿಸದೆ, ಕನ್ನಡದ ಅಸ್ಮಿತೆಗೆ ಧಕ್ಕೆ ತರುವ ರೀತಿಯಲ್ಲಿ ಈ ಪುಸ್ತಕವನ್ನು ವಿದ್ಯಾರ್ಥಿಗಳ ಮೇಲೆ ಹೇರಲಾಗುತ್ತಿದೆ ಎಂದು ದೂರಿದ್ದಾರೆ.

ಇದು ರಾಷ್ಟ್ರೀಯ ಶಿಕ್ಷಣ ನೀತಿ–2020 (ಎನ್‌ಇಪಿ–2020) ಜಾರಿಯ ಭಾಗವಾಗಿದ್ದು, ಪುಸ್ತಕ ರಚನೆ ವೇಳೆ ರಾಜ್ಯದ ಶಿಕ್ಷಣ ತಜ್ಞರು ಹಾಗೂ ಚಿಂತಕರೊಂದಿಗೆ ಯಾವುದೇ ಸಮಾಲೋಚನೆ ನಡೆಸಿಲ್ಲ. ಎನ್‌ಸಿಇಆರ್‌ಟಿಯ ಈ ನಡೆ ಅಪ್ರಜಾತಾಂತ್ರಿಕ ಹಾಗೂ ದಮನಕಾರಿ ಎಂದು ಎಐಡಿಎಸ್‌ಓ ಖಂಡಿಸಿದೆ.

'ಸಮತೋಲನ ಆಹಾರ' ಪಾಠದಲ್ಲಿ ಉದ್ದೇಶಪೂರ್ವಕವಾಗಿ ಮೀನು ಮತ್ತು ಮಾಂಸದಂತಹ ಆಹಾರ ಪದಾರ್ಥಗಳನ್ನು ಕೈಬಿಟ್ಟು ಕೇವಲ ಸಸ್ಯಾಹಾರವನ್ನಷ್ಟೇ ಉಲ್ಲೇಖಿಸಿರುವುದು ಶಿಕ್ಷಣದ ವೈಜ್ಞಾನಿಕ ದೃಷ್ಟಿಕೋನಕ್ಕೆ ವಿರುದ್ಧವಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ರಾಜ್ಯ ಸರ್ಕಾರವು ಕನ್ನಡದ ಆಚಾರ–ವಿಚಾರ, ಸಾಹಿತ್ಯ ಹಾಗೂ ಸಾಂಸ್ಕೃತಿಕ ಪರಂಪರೆಯನ್ನು ಪರಿಚಯಿಸುವ ಗುಣಮಟ್ಟದ ಪಠ್ಯಪುಸ್ತಕವನ್ನು ಸಿದ್ಧಪಡಿಸಿ ವಿದ್ಯಾರ್ಥಿಗಳಿಗೆ ಒದಗಿಸಬೇಕು. ಈ ನಿಟ್ಟಿನಲ್ಲಿ ಸ್ಪಷ್ಟ ನಿಲುವು ತಾಳಿ ಎನ್‌ಸಿಇಆರ್‌ಟಿ ಪುಸ್ತಕವನ್ನು ತಿರಸ್ಕರಿಸಬೇಕೆಂದು ಮುಖ್ಯಮಂತ್ರಿ ಅವರನ್ನು ಎಐಡಿಎಸ್‌ಓ ಒತ್ತಾಯಿಸಿದೆ.

**ಭೂಮಿಪೂಜೆ–ಉದ್ಘಾಟನೆ ನೆರವೇರಿಸಿದ ಶಾಸಕ ನೇಮಿರಾಜ್ ನಾಯಕ್**

# ₹6 ಕೋಟಿ ರಸ್ತೆ ಕಾಮಗಾರಿಗೆ ಹಸಿರು ನಿಶಾನೆ

■ ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಹಗರಿಬೊಮ್ಮನಹಳ್ಳಿ ಪಟ್ಟಣ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಸುಮಾರು ₹6 ಕೋಟಿ ವೆಚ್ಚದ ರಸ್ತೆ ಅಭಿವೃದ್ಧಿ ಕಾಮಗಾರಿಗಳಿಗೆ ಶಾಸಕ ಕೆ. ನೇಮಿರಾಜ್ ನಾಯಕ್ ಭೂಮಿಪೂಜೆ ಹಾಗೂ ಉದ್ಘಾಟನೆ ನೆರವೇರಿಸಿದರು.

ಪಟ್ಟಣದ ತೇರುಬೀದಿ ರಸ್ತೆಯಿಂದ ಗುರುಭವನದ ರಸ್ತೆವರೆಗೆ 2024–25 ಹಾಗೂ 2025–26ನೇ ಸಾಲಿನ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಮೈಕ್ರೋ ಯೋಜನೆಯಡಿ ಸುಮಾರು ₹2 ಕೋಟಿ ವೆಚ್ಚದಲ್ಲಿ ಸಿಸಿ ರಸ್ತೆ ಹಾಗೂ ಚರಂಡಿ ನಿರ್ಮಾಣ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಲಾಯಿತು.

ಇದೇ ವೇಳೆ ಕೆಚ್ಚಿನಬಂಡಿ ಬಸ್‌ಸ್ಟ್ಯಾಂಡ್ ಕ್ರಾಸ್‌ನಿಂದ ರಾರಾಳ್ ತಾಂಡಾ ವೃತ್ತದವರೆಗೆ, ಕೆಚ್ಚಿನ ಮಂಡಿ ಗ್ರಾಮದ ಒಳರಸ್ತೆ ಹಾಗೂ ಹೊಸ ಆನಂದ ದೇವನಹಳ್ಳಿವರೆಗೆ ಸಂಪರ್ಕಿಸುವ ರಸ್ತೆಗಳ ಅಭಿವೃದ್ಧಿಗೆ ಸುಮಾರು ₹4 ಕೋಟಿ ವೆಚ್ಚದ ಕಾಮಗಾರಿಗೆ ಚಾಲನೆ ನೀಡಲಾಯಿತು.



ಈ ಸಂದರ್ಭದಲ್ಲಿ ಮಾತನಾಡಿದ ಶಾಸಕ ನೇಮಿರಾಜ್ ನಾಯಕ್, ಕ್ಷೇತ್ರದಾದ್ಯಂತ ವಿವಿಧ ಅನುದಾನಗಳಡಿ ಒಟ್ಟು ₹90 ಕೋಟಿ ವೆಚ್ಚದಲ್ಲಿ ರಸ್ತೆ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳುವ ಗುರಿ ಹೊಂದಲಾಗಿದೆ ಎಂದು ತಿಳಿಸಿದರು. ಹಿಂದಿನ ಹತ್ತು ವರ್ಷಗಳಲ್ಲಿ ಆಗದ ರಸ್ತೆ ಹಾಗೂ ಮೂಲಸೌಕರ್ಯ ಕಾಮಗಾರಿಗಳನ್ನು ತಮ್ಮ ಅವಧಿಯಲ್ಲಿ ಪೂರ್ಣಗೊಳಿಸಲಾಗುವುದು ಎಂದು ಹೇಳಿದರು.

ತುಂಗಭದ್ರ ಡ್ಯಾಂನ 30 ಸ್ಟೀಲ್ ಗೇಟ್‌ಗಳ ಉದ್ಘಾಟನಾ ಕಾರ್ಯಕ್ರಮಕ್ಕೆ ಏಕೆ ತೆರಳಿಲ್ಲ ಎಂಬ ಪತ್ರಕರ್ತರ ಪ್ರಶ್ನೆಗೆ, ಅಧಿಕಾರಿಗಳು ಹಾಗೂ ನೀರಾವರಿ ಸಚಿವರಿಂದ ಆಹ್ವಾನ ಬಂದಿದ್ದರೂ ಕ್ಷೇತ್ರದ ಅಭಿವೃದ್ಧಿ ಕಾರ್ಯಕ್ರಮಗಳು ಹಾಗೂ ಜನರ ಕೆಲಸಗಳಿಗೆ ಆದ್ಯತೆ ನೀಡಿದ ಕಾರಣ ಕಾರ್ಯಕ್ರಮಕ್ಕೆ ತೆರಳಲಿಲ್ಲ ಎಂದು ಸ್ಪಷ್ಟಪಡಿಸಿದರು.

ಗುರುಭವನ ರಸ್ತೆ ಕಾಮಗಾರಿಯನ್ನು ಕರ್ನಾಟಕ ಭೂಸೇನಾ ನಿಗಮ ಹಾಗೂ ಕೆಚ್ಚಿನ ಮಂಡಿ ರಸ್ತೆ ಕಾಮಗಾರಿಯನ್ನು ಲೋಕೋಪಯೋಗಿ ಇಲಾಖೆ ಕೈಗೆತ್ತಿಕೊಳ್ಳಲಿದೆ ಎಂದು ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ಪುರಸಭೆ ಸದಸ್ಯ ನವೀನ್ ಸಂಜ್ಯೋತ, ಬಿಜೆಪಿ ಮಂಡಲ ಅಧ್ಯಕ್ಷ ಬೆಣಕಲ್ ಪ್ರಕಾಶ್, ಬಿಜೆಪಿ ಮುಖಂಡ ಸಂದೀಪ್ ಶಿವಮೊಗ್ಗ, ಜೆಡಿಎಸ್ ಕ್ಷೇತ್ರಾಧ್ಯಕ್ಷ ವೈ. ಮಲ್ಲಿಕಾರ್ಜುನ, ಕನ್ನಿಹಳ್ಳಿ ಚಂದ್ರಶೇಖರ್, ಸರ್ದಾರ್ ಯಮನೂರಪ್ಪ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಜನಪ್ರತಿನಿಧಿಗಳು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

> "ಕ್ಷೇತ್ರದ ರಸ್ತೆ ಅಭಿವೃದ್ಧಿಗೆ ₹90 ಕೋಟಿ ವೆಚ್ಚದ ಗುರಿ ಹೊಂದಿದ್ದೇವೆ. ಜನರು ನನ್ನನ್ನು ಗೆಲ್ಲಿಸಿ ಕಳುಹಿಸಿರುವುದರಿಂದ ಅವರ ಕೆಲಸಕ್ಕೆ ಮೊದಲ ಆದ್ಯತೆ ನೀಡುತ್ತಿದ್ದೇನೆ. ಪ್ರತಿಯೊಂದು ಗ್ರಾಮಕ್ಕೂ ಗುಣಮಟ್ಟದ ರಸ್ತೆ ಮತ್ತು ಮೂಲಸೌಕರ್ಯ ಕಲ್ಪಿಸುವುದು ನನ್ನ ಸಂಕಲ್ಪ."
> – **ಕೆ. ನೇಮಿರಾಜ್ ನಾಯಕ್,**
> ಶಾಸಕ, ಹಗರಿಬೊಮ್ಮನಹಳ್ಳಿ ವಿಧಾನಸಭಾ ಕ್ಷೇತ್ರ

## ಮೆಟ್ರೋ ಪಿಲ್ಲರ್‌ಗೆ ಲೈಟಿಂಗ್ ಅಳವಡಿಸುವಾಗ ವಿದ್ಯುತ್ ಶಾಕ್: ಕಾರ್ಮಿಕ ಸಾವು!

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ನಮ್ಮ ಮೆಟ್ರೋ ಪಿಲ್ಲರ್‌ಗೆ ಲೈಟಿಂಗ್ ಅಳವಡಿಸುವ ಕಾಮಗಾರಿ ವೇಳೆ ವಿದ್ಯುತ್ ಪ್ರವಹಿಸಿ ಕಾರ್ಮಿಕನೊಬ್ಬ ಮೃತಪಟ್ಟಿರುವ ದುರ್ಘಟನೆ ನಗರದ ಟ್ರಿನಿಟಿ ಮೆಟ್ರೋ ನಿಲ್ದಾಣದ ಸಮೀಪ ಸಂಭವಿಸಿದೆ.

ಮೃತ ಕಾರ್ಮಿಕನನ್ನು ಗುರಪ್ಪ (70) ಎಂದು ಗುರುತಿಸಲಾಗಿದೆ. ವೈಟ್‌ಫೀಲ್ಡ್–ಚಲ್ಲಘಟ್ಟ ನೇರಳೆ ಮಾರ್ಗದ ಟ್ರಿನಿಟಿ ಮೆಟ್ರೋ ನಿಲ್ದಾಣದ 153ನೇ ಪಿಲ್ಲರ್ ಸಮೀಪ ಈ ಅವಘಡ ನಡೆದಿದೆ.

ಬಿಎಂಆರ್‌ಸಿಎಲ್‌ನಿಂದ ಲೈಟಿಂಗ್ ಅಳವಡಿಸುವ ಕಾಮಗಾರಿಯ ಗುತ್ತಿಗೆಯನ್ನು ಎಂಆರ್ ಎಲೆಕ್ಟ್ರಿಕಲ್ಸ್ ಸಂಸ್ಥೆ ಪಡೆದಿತ್ತು. ಅದರಂತೆ ಗುರಪ್ಪ ಅವರು ಪಿಲ್ಲರ್‌ಗೆ ಲೈಟಿಂಗ್ ಅಳವಡಿಸುವ ಕೆಲಸದಲ್ಲಿ ನಿರತರಾಗಿದ್ದರು.

## ಡಿ.ಇ.ಎಲ್.ಇಡಿ ಸೀಟು ಹಂಚಿಕೆ ಪಟ್ಟಿ ಪ್ರಕಟ

■ ವಿಜಯಸಾಕ್ಷಿ ಸುದ್ದಿ, ಗದಗ

2026–27ನೇ ಶೈಕ್ಷಣಿಕ ಸಾಲಿನ ಡಿ.ಇ.ಎಲ್.ಇಡಿ ಕೋರ್ಸಿನ ಸರ್ಕಾರಿ ಕೋಟಾದಡಿ ಸೀಟು ಹಂಚಿಕೆ ಪಟ್ಟಿಯನ್ನು ಗದಗ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ (ಡಯಟ್) ಕಚೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲಾಗಿದೆ. ಸರ್ಕಾರಿ ಕೋಟಾದಡಿ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳು ಡಯಟ್ ಗದಗ ಕಚೇರಿಗೆ ಖುದ್ದಾಗಿ ಭೇಟಿ ನೀಡಿ ತಮಗೆ ಹಂಚಿಕೆಯಾಗಿರುವ ಶಿಕ್ಷಣ ಸಂಸ್ಥೆಯನ್ನು ಖಚಿತಪಡಿಸಿಕೊಳ್ಳುವಂತೆ ಪ್ರಕಟಣೆ ತಿಳಿಸಿದೆ.

ಅಭ್ಯರ್ಥಿಗಳು ದಾಖಲಾತಿ ಶುಲ್ಕದ ಡಿಮ್ಯಾಂಡ್ ಡ್ರಾಫ್ಟ್ (ಡಿಡಿ)ಯನ್ನು ಯಾವುದೇ ರಾಷ್ಟ್ರೀಕೃತ ಬ್ಯಾಂಕ್‌ನಲ್ಲಿ ಪಡೆದು, ಮೂಲ ದಾಖಲೆಗಳೊಂದಿಗೆ ಜುಲೈ 4ರೊಳಗೆ ಡಯಟ್ ಗದಗ ಕೇಂದ್ರಕ್ಕೆ ಸಲ್ಲಿಸಿ ದಾಖಲಾತಿ ಪತ್ರವನ್ನು ಪಡೆಯಬೇಕು. ಬಳಿಕ ಸಂಬಂಧಿಸಿದ ಶಿಕ್ಷಣ ಸಂಸ್ಥೆಯಲ್ಲಿ ಜುಲೈ 6ರೊಳಗೆ ದಾಖಲಾತಿ ಪ್ರಕ್ರಿಯೆ ಪೂರ್ಣಗೊಳಿಸುವುದು ಕಡ್ಡಾಯವಾಗಿದೆ.

ನಿಗದಿತ ಅವಧಿಯೊಳಗೆ ದಾಖಲಾತಿ ಪಡೆಯದ ಅಭ್ಯರ್ಥಿಗಳಿಗೆ ನಂತರ ಯಾವುದೇ ಅವಕಾಶ ನೀಡಲಾಗುವುದಿಲ್ಲ ಎಂದು ಡಯಟ್ ಎಚ್ಚರಿಸಿದೆ. ಹೆಚ್ಚಿನ ಮಾಹಿತಿಗಾಗಿ ಶಾಲಾ ಶಿಕ್ಷಣ ಇಲಾಖೆಯ ವೆಬ್‌ಸೈಟ್‌ನ್ನು ಪರಿಶೀಲಿಸಬಹುದು. ಅಲ್ಲದೇ ಡಯಟ್ ಗದಗದ ನೋಡಲ್ ಅಧಿಕಾರಿ ಜಿ.ಎಂ. ಮುಂದಿನಮನಿ (ಮೊ. 7619277145) ಅವರನ್ನು ಸಂಪರ್ಕಿಸಬಹುದಾಗಿದೆ.

**ಗೈರುಹಾಜರಾದ ವಿದ್ಯಾರ್ಥಿಗಳನ್ನು ಮರಳಿ ಶಾಲೆಗೆ ಸೇರಿಸಲು ಇಓ ಶ್ರೀಧರ್ ಚಿನಗುಂಡಿ ಕಟ್ಟುನಿಟ್ಟಿನ ಸೂಚನೆ**

# ಶಾಲೆಯಿಂದ ಹೊರಗುಳಿದ ಮಕ್ಕಳ ಪತ್ತೆಗೆ ವಿಶೇಷ ಅಭಿಯಾನ

■ ವಿಜಯಸಾಕ್ಷಿ ಸುದ್ದಿ, ನರಗುಂದ

ತಾಲೂಕಿನ ಸರ್ಕಾರಿ ಶಾಲೆಗಳಿಂದ ಹೊರಗುಳಿದ ಮಕ್ಕಳನ್ನು ಪುನಃ ಶಾಲೆಗೆ ದಾಖಲಿಸಲು ವಿಶೇಷ ಅಭಿಯಾನ ಕೈಗೊಳ್ಳುವಂತೆ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಶ್ರೀಧರ್ ಚಿನಗುಂಡಿ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಶಿರೋಳ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕಲ್ಲಾಪುರ ಸರ್ಕಾರಿ ಹಿರಿಯ ಪ್ರೌಢಶಾಲೆಗೆ ಭೇಟಿ ನೀಡಿದ ಅವರು, ಶಿಕ್ಷಕರ ಹಾಗೂ ವಿದ್ಯಾರ್ಥಿಗಳ ಹಾಜರಾತಿ ಪರಿಶೀಲನೆ ನಡೆಸಿದ ವೇಳೆ ಐವರು ವಿದ್ಯಾರ್ಥಿಗಳು ದೀರ್ಘಾವಧಿಯಿಂದ ಶಾಲೆಗೆ ಗೈರಾಗಿರುವುದು ಬೆಳಕಿಗೆ ಬಂತು.

ತಕ್ಷಣವೇ ಕ್ಷೇತ್ರ ಶಿಕ್ಷಣಾಧಿಕಾರಿಯನ್ನು ದೂರವಾಣಿ ಮೂಲಕ ಸಂಪರ್ಕಿಸಿದ ಇಓ ಶ್ರೀಧರ್ ಚಿನಗುಂಡಿ, ಗೈರುಹಾಜರಾಗಿರುವ ಮಕ್ಕಳನ್ನು ಮರಳಿ ಶಾಲೆಗೆ ಸೇರಿಸಲು ತುರ್ತು ಕ್ರಮ ಕೈಗೊಳ್ಳುವಂತೆ ಸೂಚಿಸಿದರು. ಜೊತೆಗೆ ತಾಲೂಕಿನಾದ್ಯಂತ ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಗುರುತಿಸಿ ಪುನಃ ದಾಖಲಿಸುವ ವಿಶೇಷ ಅಭಿಯಾನ ಹಮ್ಮಿಕೊಳ್ಳುವಂತೆ ನಿರ್ದೇಶನ ನೀಡಿದರು. ಇದಕ್ಕೆ ಸ್ಪಂದಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳು ಅಗತ್ಯ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.



ಭೇಟಿಯ ವೇಳೆ ಶಾಲೆಯಲ್ಲೇ ಮಧ್ಯಾಹ್ನದ ಬಿಸಿಯೂಟ ಸವಿದ ಇಓ ಅವರು, ಆಹಾರದ ಗುಣಮಟ್ಟವನ್ನು ಪರಿಶೀಲಿಸಿದರು. ಅಡುಗೆ ಕೊಠಡಿಗೆ ಭೇಟಿ ನೀಡಿ ಆಹಾರ ಸಾಮಗ್ರಿಗಳ ಸಂಗ್ರಹಣೆ ಹಾಗೂ ಶುಚಿತ್ವವನ್ನು ವೀಕ್ಷಿಸಿ, ಮನೆಯ ಮಕ್ಕಳಿಗೆ ಸಿದ್ಧಪಡಿಸುವ ಗುಣಮಟ್ಟದಲ್ಲೇ ಶಾಲಾ ಮಕ್ಕಳಿಗೂ ಆಹಾರ ತಯಾರಿಸುವಂತೆ ಅಡುಗೆ ಸಿಬ್ಬಂದಿಗೆ ಸೂಚಿಸಿದರು.

> "ತಾಲೂಕಿನ ಯಾವುದೇ ಮಗು ಶಾಲೆಯಿಂದ ಹೊರಗುಳಿಯಬಾರದು. ಗೈರುಹಾಜರಾಗಿರುವ ಮಕ್ಕಳನ್ನು ಗುರುತಿಸಿ ಪುನಃ ಶಾಲೆಗೆ ಸೇರಿಸಲು ವಿಶೇಷ ಅಭಿಯಾನ ಕೈಗೊಳ್ಳಬೇಕು."
> – **ಶ್ರೀಧರ್ ಚಿನಗುಂಡಿ,**
> ಇಓ. ತಾಲ್ಲೂಕು ಪಂಚಾಯತಿ ನರಗುಂದ.

ಶಿಕ್ಷಕರ ಚಲನವಲನ ಪುಸ್ತಕ, ಅಡುಗೆ ಸಿಬ್ಬಂದಿಯ ಸ್ಟಾಕ್ ರಿಜಿಸ್ಟರ್ ಸೇರಿದಂತೆ ವಿವಿಧ ದಾಖಲೆಗಳನ್ನು ಪರಿಶೀಲಿಸಿದ ಅವರು, ಎಲ್ಲಾ ದಾಖಲಾತಿಗಳನ್ನು ನಿಯಮಿತವಾಗಿ ನವೀಕರಿಸಬೇಕು ಎಂದು ತಿಳಿಸಿದರು.

ಇದೇ ವೇಳೆ ಶಾಲಾ ಮೈದಾನದ ಕಾಂಪೌಂಡ್ ಗೋಡೆ ಕಾಮಗಾರಿ, ಶಿರೋಳ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹೊಸ ಗಟಾರ್ ಕಾಮಗಾರಿ ಸ್ಥಳ ಹಾಗೂ ನರೇಗಾ ಯೋಜನೆಯಡಿ ನಿರ್ಮಿಸಲಾದ ಸ್ಮಶಾನ ಅಭಿವೃದ್ಧಿ ಕಾಮಗಾರಿಯನ್ನು ಪರಿಶೀಲಿಸಿದರು.

ನಂತರ ಅಂಗನವಾಡಿ ಕೇಂದ್ರಕ್ಕೆ ಭೇಟಿ ನೀಡಿ ಕಾರ್ಯಕರ್ತೆಯರ ಹಾಜರಾತಿ, ಪೌಷ್ಟಿಕ ಆಹಾರ ಮತ್ತು ರೇಷನ್ ದಾಸ್ತಾನು ದಾಖಲೆಗಳನ್ನು ಪರಿಶೀಲಿಸಿದರು. ಶಿರೋಳ ಗ್ರಾಮ ಪಂಚಾಯಿತಿ ಕಚೇರಿಗೂ ಭೇಟಿ ನೀಡಿ ಸಿಬ್ಬಂದಿಯ ಹಾಜರಾತಿ ಪುಸ್ತಕ ಪರಿಶೀಲಿಸಿ ಅಗತ್ಯ ಸೂಚನೆಗಳನ್ನು ನೀಡಿದರು.

ಈ ಸಂದರ್ಭದಲ್ಲಿ ಪಿಡಿಓ ಮಲ್ಲಪ್ಪ ವಾಲಿ, ನರೇಗಾ ತಾಂತ್ರಿಕ ಸಂಯೋಜಕ ಹನಮಂತ ಡಂಬಳ, ತಾಂತ್ರಿಕ ಸಹಾಯಕ ವೀರಯ್ಯ ಶಹಾಪುರ ಹಾಗೂ ಗ್ರಾಮ ಪಂಚಾಯಿತಿ ಸಿಬ್ಬಂದಿ ಉಪಸ್ಥಿತರಿದ್ದರು.

**ಜಿಲ್ಲಾಧ್ಯಕ್ಷರಾಗಿ ಮಂಜುನಾಥ ಮರಾಠೆ ಅವಿರೋಧ ಆಯ್ಕೆ; ಗೌರವ ಅಧ್ಯಕ್ಷರಾಗಿ ಕುಮಾರ ಕಟ್ಟಿಮನಿ**

# ಪತ್ರಕರ್ತರ ಕ್ಷೇಮಾಭಿವೃದ್ಧಿ ಸಂಘಕ್ಕೆ ಹೊಸ ಸಾರಥ್ಯ



■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಕರ್ನಾಟಕ ಪತ್ರಕರ್ತರ ಕ್ಷೇಮಾಭಿವೃದ್ಧಿ ಸಂಘದ ನೂತನ ಅಧ್ಯಕ್ಷರಾಗಿ ಮಂಜುನಾಥ ಮರಾಠೆ ಹಾಗೂ ಗೌರವ ಅಧ್ಯಕ್ಷರಾಗಿ ಕುಮಾರ ಕಟ್ಟಿಮನಿ ಅವರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ನಗರದ ಪ್ರವಾಸಿ ಮಂದಿರದಲ್ಲಿ ನಡೆದ ಜಿಲ್ಲಾ ಘಟಕದ ಪದಾಧಿಕಾರಿಗಳ ಸಭೆಯಲ್ಲಿ ಆಯ್ಕೆ ಪ್ರಕ್ರಿಯೆ ನಡೆಯಿತು. ಪದಾಧಿಕಾರಿಗಳಿಂದ ಗುಪ್ತವಾಗಿ ಅಭಿಪ್ರಾಯ ಸಂಗ್ರಹಿಸಿದ ಬಳಿಕ ರಾಜ್ಯ ಘಟಕದ ಸದಸ್ಯ ಕಳಕೇಶ್ ಉಳಕ್ಕಿ ಅವರು ನೂತನ ಪದಾಧಿಕಾರಿಗಳ ಹೆಸರನ್ನು ಅಧಿಕೃತವಾಗಿ ಘೋಷಿಸಿದರು.

ಸಂಘದ ಉಪಾಧ್ಯಕ್ಷರಾಗಿ ಚಂದ್ರು ಪಾಟೀಲ್, ಜಿಲ್ಲಾ ಉಪಾಧ್ಯಕ್ಷೆಯಾಗಿ ಶಿಲ್ಪಾ ಬಂಡಿಹಾಳ್, ಪ್ರಧಾನ ಕಾರ್ಯದರ್ಶಿಯಾಗಿ ಶಶಿಕಾಂತ್ (ಶ್ರೀಕಾಂತ್) ಅಂಗಡಿ, ಜಂಟಿ ಕಾರ್ಯದರ್ಶಿಯಾಗಿ ಬಸವರಾಜ್ ಈರಣ್ಣವರ, ಖಜಾಂಚಿಯಾಗಿ ಪ್ರದೀಪ್ ಹಿರೇಮಠ್ ಆಯ್ಕೆಯಾದರು.

ಜಿಲ್ಲಾ ಸಂಘಟನಾ ಕಾರ್ಯದರ್ಶಿಗಳಾಗಿ ಧರ್ಮೇಂದ್ರ ಇಟಗಿ, ಶೇಖಸಾಬ್ ಕಾತರಕಿ, ಪ್ರವೀಣ್‌ಕುಮಾರ್ ಕನ್ಯಾಳ್, ಜಗದೀಶ್ ಬಳಿಗೇರ್, ಗಾಳೆಪ್ಪ ಹರಿಜನ್, ಶಿವಯೋಗಿ ಭಾವಿ ಹಾಗೂ ಪ್ರದೀಪ್ ಕನ್ಯಾಳ್ ಆಯ್ಕೆಯಾಗಿದ್ದಾರೆ.

ಈ ವೇಳೆ ಮಾತನಾಡಿದ ರಾಜ್ಯ ಘಟಕದ ಸದಸ್ಯ ಕಳಕೇಶ್ ಉಳಕ್ಕಿ, ಪತ್ರಕರ್ತರು ಹಲವು ಸಂಕಷ್ಟಗಳ ನಡುವೆ ಕರ್ತವ್ಯ ನಿರ್ವಹಿಸುತ್ತಿದ್ದು, ಅವರ ಸಮಸ್ಯೆಗಳಿಗೆ ಸಂಘದ ಪದಾಧಿಕಾರಿಗಳು ಧ್ವನಿಯಾಗಿ ಕೆಲಸ ಮಾಡಬೇಕು ಎಂದು ಸಲಹೆ ನೀಡಿದರು. ಸರ್ಕಾರದಿಂದ ದೊರೆಯುವ ಎಲ್ಲಾ ಸೌಲಭ್ಯಗಳು ಪ್ರತಿಯೊಬ್ಬ ಪತ್ರಕರ್ತರಿಗೂ ತಲುಪುವಂತೆ ಸಂಘ ಕಾರ್ಯನಿರ್ವಹಿಸಬೇಕು ಎಂದು ಹೇಳಿದರು.

ನೂತನ ಪದಾಧಿಕಾರಿಗಳು, ಎಲ್ಲರನ್ನು ವಿಶ್ವಾಸಕ್ಕೆ ತೆಗೆದು–ಕೊಂಡು ಸಂಘವನ್ನು ಇನ್ನಷ್ಟು ಬಲಿಷ್ಠಗೊಳಿಸಿ ಪತ್ರಕರ್ತರ ಹಿತಾಸಕ್ತಿಗಾಗಿ ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸುವುದಾಗಿ ಭರವಸೆ ನೀಡಿದರು.

**33 ದಿನಗಳ ವಿಶೇಷ ವ್ರತಾಚರಣೆಗೆ ಉದ್ಯಾಪನೆ, ಅನ್ನಸಂತರ್ಪಣೆಯೊಂದಿಗೆ ಸಮಾರೋಪ**

# ಅಧಿಕಮಾಸ ವ್ರತ ಸಂಪನ್ನ

■ ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಅಧಿಕಮಾಸದ ಅಂಗವಾಗಿ ನವನಗರದ ಶ್ರೀ ಕಾಳಿಕಾ ದೇವಸ್ಥಾನದಲ್ಲಿ ವಿಶ್ವಚೇತನ ಮಹಿಳಾ ಮಂಡಳದಿಂದ ಹಮ್ಮಿಕೊಂಡಿದ್ದ 33 ದಿನಗಳ ಅಧಿಕಮಾಸ ವ್ರತಾಚರಣೆಯು ಉದ್ಯಾಪನೆ ಹಾಗೂ ಅನ್ನಸಂತರ್ಪಣೆಯೊಂದಿಗೆ ಸಂಪನ್ನಗೊಂಡಿತು.

ಅಧಿಕಮಾಸದ ಅವಧಿಯಲ್ಲಿ ಮಹಿಳಾ ಮಂಡಳದ ಸದಸ್ಯರು ಪ್ರತಿದಿನ ಕೃಷ್ಣ ತುಳಸಿ ಕಲ್ಯಾಣ ಪೂಜೆ, ದಂಪತಿಗಳಿಗೆ ಬಾಗಿನ ಅರ್ಪಣೆ, ಮುತ್ತೈದೆಯರಿಗೆ ಉಡಿ ತುಂಬುವ ಕಾರ್ಯಕ್ರಮ ಹಾಗೂ ಅಪೂಪ ದಾನ ಸೇರಿದಂತೆ ವಿವಿಧ ಧಾರ್ಮಿಕ ಸೇವಾ ಕಾರ್ಯಗಳನ್ನು ನಡೆಸಿದರು. ಅಲ್ಲದೆ, ವಿವಿಧ ಗೃಹಿಣಿಯರ ಮನೆಗಳಲ್ಲಿ ತುಳಸಿ ಪೂಜೆ ನೆರವೇರಿಸಿ, ಪುರಂದರದಾಸರ ಪದಗಳು ಹಾಗೂ ರಾಮ–ಕೃಷ್ಣ ಭಜನೆಗಳನ್ನು ಹಾಡುವ ಮೂಲಕ ವ್ರತಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.



ಸಮಾರೋಪ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಮಾತನಾಡಿದ ಶ್ರೀ ವಿಶ್ವಕರ್ಮ ವಿಕಾಸ ಸಮಿತಿ ಟ್ರಸ್ಟ್ ಅಧ್ಯಕ್ಷ ಸಿ.ಪಿ. ಮಾಯಾಚಾರಿ, ಭಾರತೀಯ ಧಾರ್ಮಿಕ ಪರಂಪರೆಯಲ್ಲಿ ಅಧಿಕಮಾಸದ ಮಹತ್ವವನ್ನು ವಿವರಿಸಿ, "ಭಾರತೀಯರ ದಾನ ಸಂಸ್ಕೃತಿಯ ಪ್ರತೀಕವಾಗಿ ಅಧಿಕಮಾಸ ವಿಶೇಷ ಸ್ಥಾನ ಪಡೆದಿದೆ" ಎಂದು ಹೇಳಿದರು.

ವಿಶ್ವಚೇತನ ಮಹಿಳಾ ಮಂಡಳದ ಅಧ್ಯಕ್ಷೆ ಶ್ರೀಮತಿ ಮೀನಾಕ್ಷಿ ಬಡಿಗೇರ ಅಧ್ಯಕ್ಷತೆ ವಹಿಸಿ ಮಾತನಾಡಿ, ಕಳೆದ ಹತ್ತು ವರ್ಷಗಳಿಂದ ನವನಗರದಲ್ಲಿ ಅಧಿಕಮಾಸ ವ್ರತಾಚರಣೆಯನ್ನು ನಿರಂತರವಾಗಿ ನಡೆಸಿಕೊಂಡು ಬರಲಾಗುತ್ತಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಶ್ರೀ ಕಾಳಿಕಾ ದೇವಸ್ಥಾನದ ಅರ್ಚಕ ನಾರಾಯಣ ಆಚಾರ್ಯ ಲಕ್ಕುಂಡಿ, ಕಾರ್ಯಕ್ರಮ ಸಂಯೋಜಕರಾದ ಮೀನಾಕ್ಷಿ ಮತ್ತು ಮೋಹನ ಬಡಿಗೇರ, ಶೋಭಾ ಮತ್ತು ಜಕಣಾಚಾರ್ಯ ಕರವೀರಕರ, ಶೋಭಾ ಮತ್ತು ಎಸ್.ಎನ್. ಬಡಿಗೇರ ದಂಪತಿ ಹಾಗೂ ಸಂಗೀತ ಕಲಾವಿದ ವಾಸು ಸೋನಾರ ಅವರನ್ನು ಸನ್ಮಾನಿಸಲಾಯಿತು.

**ಜೂನ್ 28ರಿಂದ ಪಲ್ಸ್ ಪೋಲಿಯೋ ಅಭಿಯಾನ; 12,597 ಮಕ್ಕಳಿಗೆ ಲಸಿಕೆ ಗುರಿ**

# ಪೋಲಿಯೋ ಮುಕ್ತ ಮುಂಡರಗಿಗೆ ಸಜ್ಜು..!

■ ವಿಜಯಸಾಕ್ಷಿ ಸುದ್ದಿ, ಮುಂಡರಗಿ

ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮದ ಯಶಸ್ವಿ ಅನುಷ್ಠಾನಕ್ಕಾಗಿ ತಾಲೂಕು ಮಟ್ಟದ ಟಾಸ್ಕ್‌ಫೋರ್ಸ್ ಸಮಿತಿ ಸಭೆ ತಹಸೀಲ್ದಾರ್ ಹಾಗೂ ತಾಲೂಕು ದಂಡಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಗುರುವಾರ ತಹಶೀಲ್ದಾರ್ ಕಚೇರಿಯಲ್ಲಿ ನಡೆಯಿತು.

ಸಭೆಯಲ್ಲಿ ತಾಲೂಕು ಆರೋಗ್ಯಾಧಿಕಾರಿ ಡಾ. ಸಂತೋಷಗೌಡ ಪಾಟೀಲ ಮಾತನಾಡಿ, ಜೂನ್ 28ರಿಂದ ಜುಲೈ 1ರವರೆಗೆ ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮ ನಡೆಯಲಿದ್ದು, ಜೂನ್ 28ರಂದು ಬೂತ್‌ಗಳಲ್ಲಿ 0ರಿಂದ 5 ವರ್ಷದ ಮಕ್ಕಳಿಗೆ ಲಸಿಕೆ ನೀಡಲಾಗುವುದು. ನಂತರ ಜೂನ್ 29ರಿಂದ ಜುಲೈ 1ರವರೆಗೆ ಲಸಿಕೆ ಪಡೆಯದ ಮಕ್ಕಳನ್ನು ಮನೆ–ಮನೆಗೆ ತೆರಳಿ ಪತ್ತೆಹಚ್ಚಿ ಲಸಿಕೆ ನೀಡಲಾಗುವುದು ಎಂದು ತಿಳಿಸಿದರು.




ತಾಲೂಕಿನಲ್ಲಿ 104 ಲಸಿಕಾ ತಂಡಗಳು, ಒಂದು ಮೊಬೈಲ್ ತಂಡ ಹಾಗೂ ಐದು ಟ್ರಾನ್ಸಿಟ್ ತಂಡಗಳನ್ನು ರಚಿಸಲಾಗಿದ್ದು, ಒಟ್ಟು 12,597 ಮಕ್ಕಳಿಗೆ ಪೋಲಿಯೋ ಲಸಿಕೆ ನೀಡುವ ಗುರಿ ಹೊಂದಲಾಗಿದೆ ಎಂದು ಮಾಹಿತಿ ನೀಡಿದರು.

ತಾಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎಂ.ಎಸ್. ಸಜ್ಜನರ ಮಾತನಾಡಿ, ಯಾವುದೇ ಮಗು ಲಸಿಕೆಯಿಂದ ವಂಚಿತವಾಗದಂತೆ ಆರೋಗ್ಯ ಇಲಾಖೆ ಸಿಬ್ಬಂದಿ ಮನೆ–ಮನೆಗೆ ಭೇಟಿ ನೀಡಿ ಲಸಿಕೆ ನೀಡಲಿದ್ದಾರೆ ಎಂದು ಹೇಳಿದರು.

ಸಭೆಯ ಅಧ್ಯಕ್ಷತೆ ವಹಿಸಿದ್ದ ತಹಶೀಲ್ದಾರ್ ಅವರು, ಗ್ರಾಮೀಣ ಪ್ರದೇಶಗಳಲ್ಲಿ ಡಂಗೂರ ಹಾಗೂ ಮೈಕಿಂಗ್ ಮೂಲಕ ಜನರಲ್ಲಿ ಜಾಗೃತಿ ಮೂಡಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು. ಗ್ರಾಮ ಪಂಚಾಯಿತಿಗಳು ಹಾಗೂ ಪುರಸಭೆಯಿಂದ ಲಸಿಕಾ ಸಿಬ್ಬಂದಿಗೆ ಅಗತ್ಯ ಸೌಲಭ್ಯ ಕಲ್ಪಿಸುವಂತೆ ನಿರ್ದೇಶನ ನೀಡಿದರು.

ಶಾಲಾ ಮಕ್ಕಳಿಂದ ಜಾಗೃತಿ ಜಾಥಾ ಆಯೋಜಿಸಲು, ನಾಲ್ಕು ದಿನಗಳ ಕಾಲ ನಿರಂತರ ವಿದ್ಯುತ್ ಪೂರೈಕೆ ಹಾಗೂ ಅಗತ್ಯ ವಾಹನ ವ್ಯವಸ್ಥೆ ಕಲ್ಪಿಸಲು ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳಿಗೆ ಸೂಚನೆ ನೀಡಲಾಯಿತು.

## ದರ್ವೇಶಿ ಪದ್ಯ'ಕ್ಕೆ ಪುಸ್ತಕ ಸೊಗಸು ಪ್ರಶಸ್ತಿ




■ ವಿಜಯಸಾಕ್ಷಿ ಸುದ್ದಿ, ಗದಗ

ಕನ್ನಡ ಪುಸ್ತಕ ಪ್ರಾಧಿಕಾರ, ಬೆಂಗಳೂರು ವತಿಯಿಂದ 2025ನೇ ಸಾಲಿನ 'ಪುಸ್ತಕ ಸೊಗಸು–ಮುದ್ರಣ ಸೊಗಸು' ಯೋಜನೆಯಡಿ ಆಯ್ಕೆಯಾದ ಕೃತಿಗಳ ಪೈಕಿ ಹಿರಿಯ ಕವಿ ಹಾಗೂ ಪ್ರಕಾಶಕ ಎ.ಎಸ್. ಮಕಾನದಾರ ಅವರ 'ದರ್ವೇಶಿ ಪದ್ಯ' ಕವನ ಸಂಕಲನದ ಮುಖಪುಟ ವಿನ್ಯಾಸಕ್ಕೆ ₹10 ಸಾವಿರ ನಗದು ಬಹುಮಾನ ಹಾಗೂ ಪ್ರಶಸ್ತಿ ಫಲಕ ಲಭಿಸಿದೆ.

ಈ ಕುರಿತು ಕನ್ನಡ ಪುಸ್ತಕ ಪ್ರಾಧಿಕಾರದ ಅಧ್ಯಕ್ಷ ಡಾ. ಮಾನಸ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಎ.ಎಸ್. ಮಕಾನದಾರ ಅವರ ಅಕ್ಕಡಿ ಸಾಲು ಹಾಗೂ ಪ್ಯಾರಿ ಪದ್ಯ ಕವನ ಸಂಕಲನಗಳು ಆರು ಭಾಷೆಗಳಿಗೆ ಅನುವಾದಗೊಂಡಿದ್ದು, ಕುವೆಂಪು ವಿಶ್ವವಿದ್ಯಾಲಯ, ವಿಜಯನಗರದ ಶ್ರೀಕೃಷ್ಣ ದೇವರಾಯ ವಿಶ್ವವಿದ್ಯಾಲಯ, ಮಹಾರಾಷ್ಟ್ರದ ಶಿವಾಜಿ ವಿಶ್ವವಿದ್ಯಾಲಯ ಹಾಗೂ ಪುಣ್ಯಶ್ಲೋಕ ಅಹಲ್ಯಾಬಾಯಿ ಹೋಳ್ಕರ್ ವಿಶ್ವವಿದ್ಯಾಲಯಗಳ ಪಠ್ಯಕ್ರಮದಲ್ಲೂ ಸ್ಥಾನ ಪಡೆದಿವೆ.

'ದರ್ವೇಶಿ ಪದ್ಯ' ಕೃತಿಯ ಮುಖಪುಟವನ್ನು ಚಿತ್ರಕಲಾವಿದ ಈಶ್ವರ ಬಡಿಗೇರ್ ವಿನ್ಯಾಸಗೊಳಿಸಿದ್ದು, ನಿರಂತರ ಪ್ರಕಾಶನ ಪ್ರಕಟಿಸಿದೆ.

ಪ್ರಶಸ್ತಿ ಲಭಿಸಿರುವ ಹಿನ್ನೆಲೆಯಲ್ಲಿ ಸಾಹಿತಿ ಎ.ಎಸ್. ಮಕಾನದಾರ ಹಾಗೂ ಚಿತ್ರಕಲಾವಿದ ಈಶ್ವರ ಬಡಿಗೇರ್ ಅವರಿಗೆ ಗದಗ ಜಿಲ್ಲೆಯ ಸಾಹಿತ್ಯಾಸಕ್ತರು ಹಾಗೂ ಸಾರಸ್ವತ ವಲಯದ ಗಣ್ಯರು ಅಭಿನಂದನೆ ಸಲ್ಲಿಸಿದ್ದಾರೆ.

### ಕಲ್ಲಯ್ಯಜ್ಜನವರ ಜೀವ ಬೆದರಿಕೆ, ಹಣದ ಬೇಡಿಕೆ ಆರೋಪಗಳಿಗೆ ಸೋಲ್ ಟ್ರಸ್ಟ್ ಸದಸ್ಯರ ತಿರುಗೇಟು–ದೇಣಿಗೆ ರಸೀದಿ ಪ್ರದರ್ಶಿಸಿ ಸ್ಪಷ್ಟನೆ

# ಶ್ರೀಗಳ ಹೇಳಿಕೆಯ ಹಿಂದೆ ಕಾಣದ ಕೈವಾಡ!

■ ವಿಜಯಸಾಕ್ಷಿ ಸುದ್ದಿ, ಗದಗ

ವೀರೇಶ್ವರ ಪುಣ್ಯಾಶ್ರಮದ ಪೀಠಾಧಿಪತಿ ಡಾ. ಕಲ್ಲಯ್ಯಜ್ಜನವರು ತಮ್ಮ ವಿರುದ್ಧ ಮಾಡಿರುವ ಜೀವ ಬೆದರಿಕೆ ಹಾಗೂ ಹಣದ ಬೇಡಿಕೆ ಆರೋಪಗಳು ಸತ್ಯಕ್ಕೆ ದೂರವಾಗಿದ್ದು, ಅವುಗಳನ್ನು ಸಾಬೀತುಪಡಿಸಬೇಕು ಎಂದು ಪುಣ್ಯಾಶ್ರಮದ ಸೋಲ್ ಟ್ರಸ್ಟ್ ಸದಸ್ಯರು ಆಗ್ರಹಿಸಿದರು.

ನಗರದ ಪತ್ರಿಕಾ ಭವನದಲ್ಲಿ ಶುಕ್ರವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸೋಲ್ ಟ್ರಸ್ಟ್ ಸದಸ್ಯ ವಸಂತಗೌಡ ಪೊಲೀಸಪಾಟೀಲ, ಕಳೆದ 40 ವರ್ಷಗಳಿಂದ ಶ್ರೀಮಠಕ್ಕೆ ನಿಸ್ವಾರ್ಥ ಸೇವೆ ಸಲ್ಲಿಸಿದ್ದೇನೆ. 1987ರಿಂದ ಪುಟ್ಟರಾಜ ಗವಾಯಿಗಳ ಕಾಲದಿಂದಲೂ ಮಠದೊಂದಿಗೆ ನಂಟು ಹೊಂದಿದ್ದೇನೆ. ಏಕಾಏಕಿ ತಮ್ಮ ವಿರುದ್ಧ ಜೀವ ಬೆದರಿಕೆ ಆರೋಪ ಮಾಡಿರುವುದು ತೀವ್ರ ನೋವುಂಟು ಮಾಡಿದೆ. ಶ್ರೀಗಳ ಈ ಹೇಳಿಕೆಯ ಹಿಂದೆ ಕಾಣದ ಕೈವಾಡವಿದ್ದು, ಯಾರೋ ಪ್ರೇರಣೆ ನೀಡಿ ಈ ರೀತಿಯ ಹೇಳಿಕೆ ಕೊಡಿಸಿದ್ದಾರೆ ಎನ್ನುವ ಅನುಮಾನವಿದೆ ಎಂದು ಆರೋಪಿಸಿದರು.

> "ಪೀಠಾಧಿಪತಿಗಳ ಬಳಿ ₹10 ಲಕ್ಷ ಕೇಳಿದ್ದೇನೆ ಎಂಬ ಆರೋಪ ಸಂಪೂರ್ಣ ಸುಳ್ಳು. ನಾನು ಪ್ರತಿವರ್ಷ ಧಾರ್ಮಿಕ ಸಂಸ್ಥೆಗಳಿಗೆ ದೇಣಿಗೆ ನೀಡುತ್ತೇನೆ, ಹಣ ಕೇಳುವ ಪ್ರಶ್ನೆಯೇ ಉದ್ಭವಿಸುವುದಿಲ್ಲ."
> – ಇಟಗಿ ಶಿವರುದ್ರಪ್ಪ, ಸೋಲ್ ಟ್ರಸ್ಟ್ ಸದಸ್ಯ



ರಾಜು ಖಾನಪ್ಪನವರ ಅವರು ಮಠದ ಲೆಕ್ಕಪತ್ರಗಳ ಬಗ್ಗೆ ಅಲ್ಲ, ದೇಣಿಗೆ ಸ್ವೀಕಾರ ಮತ್ತು ರಸೀದಿ ನೀಡುವ ಪ್ರಕ್ರಿಯೆ ಕುರಿತು ಪ್ರಶ್ನಿಸಿದ್ದರು. ಆ ಪ್ರಶ್ನೆಯಿಂದಲೇ ಮಠದ ಗೌರವಕ್ಕೆ ಧಕ್ಕೆಯಾಗುವಂತಹದ್ದು ಏನೂ ಇಲ್ಲ ಎಂದು ಹೇಳಿದರು.

ಸೋಲ್ ಟ್ರಸ್ಟ್ ಸದಸ್ಯ ಶಿವರುದ್ರಪ್ಪ ಇಟಗಿ ಮಾತನಾಡಿ, ಪೀಠಾಧಿಪತಿಗಳಿಂದ ₹10 ಲಕ್ಷ ಹಣ ಕೇಳಿದ್ದೇನೆ ಎಂಬ ಆರೋಪ ಸಂಪೂರ್ಣ ಸುಳ್ಳು. ತಾವು ಪ್ರತಿವರ್ಷ ವೀರೇಶ್ವರ ಪುಣ್ಯಾಶ್ರಮ ಸೇರಿದಂತೆ ವಿವಿಧ ಧಾರ್ಮಿಕ ಸಂಸ್ಥೆಗಳಿಗೆ ಲಕ್ಷಾಂತರ ರೂಪಾಯಿ ದೇಣಿಗೆ ನೀಡುತ್ತಿದ್ದು, ಇಲ್ಲಿಯವರೆಗೆ ಪುಣ್ಯಾಶ್ರಮಕ್ಕೇ ₹4.50 ಲಕ್ಷಕ್ಕೂ ಅಧಿಕ ದೇಣಿಗೆ ನೀಡಿರುವುದಾಗಿ ಹೇಳಿ, ಅದರ ರಸೀದಿಗಳನ್ನು ಸುದ್ದಿಗೋಷ್ಠಿಯಲ್ಲಿ ಪ್ರದರ್ಶಿಸಿದರು.

ತಮ್ಮ ಸಹಿಯಿಲ್ಲದೆ ಟ್ರಸ್ಟ್‌ನಲ್ಲಿ ಠರಾವು ಮಾಡಿ ಬ್ಯಾಂಕ್ ಖಾತೆ ತೆರೆಯಲಾಗಿದೆ. ಈ ಹಿನ್ನೆಲೆಯಲ್ಲಿ ಬ್ಯಾಂಕ್‌ಗೆ ದೂರು ನೀಡಿ ಹಣಕಾಸು ವ್ಯವಹಾರ ತಾತ್ಕಾಲಿಕವಾಗಿ ಸ್ಥಗಿತಗೊಳಿಸುವಂತೆ ಮನವಿ ಮಾಡಿದ್ದೆ. ಇದೇ ಕಾರಣಕ್ಕೆ ತಮ್ಮ ವಿರುದ್ಧ ಆರೋಪ ಮಾಡಲಾಗುತ್ತಿದೆ ಎಂದು ದೂರಿದರು.

ಟ್ರಸ್ಟ್ ಸದಸ್ಯ ಚಂದ್ರು ಬಾಳಿಹಳ್ಳಿಮಠ ಮಾತನಾಡಿ, ಪುಣ್ಯಾಶ್ರಮವು ಲಕ್ಷಾಂತರ ಭಕ್ತರ ದೇಣಿಗೆಯಿಂದ ಬೆಳೆದಿದೆ. ದೇಣಿಗೆ ನೀಡಿದವರ ಹೆಸರನ್ನು ರಥದ ಗಾಲಿ ಸೇರಿದಂತೆ ವಿವಿಧೆಡೆ ದಾಖಲಿಸುವುದು ಹಿಂದಿನಿಂದಲೂ ನಡೆದುಕೊಂಡು ಬಂದಿರುವ ಪದ್ಧತಿ. ನಾಲ್ಕು ವರ್ಷಗಳ ಹಿಂದೆ ದಾಖಲಿಸಿದ ಹೆಸರಿನ ಬಗ್ಗೆ ಈಗ ಆಕ್ಷೇಪ ವ್ಯಕ್ತಪಡಿಸುತ್ತಿರುವುದು ಅಚ್ಚರಿ ತಂದಿದೆ ಎಂದರು.

ಜಾತ್ರೆ ಈಗಾಗಲೇ ಆರಂಭವಾಗಿದ್ದು, ಈ ಸಂದರ್ಭದಲ್ಲಿ ಯಾವುದೇ ಗೊಂದಲ ಸೃಷ್ಟಿಸದೆ ಭಕ್ತರೆಲ್ಲರೂ ಸೇರಿ ಜಾತ್ರೆಯನ್ನು ಯಶಸ್ವಿಗೊಳಿಸಬೇಕು. ಬಳಿಕ ಸಮಾಜದ ಹಿರಿಯರು, ಭಕ್ತರು ಹಾಗೂ ಶ್ರೀಗಳನ್ನು ಒಳಗೊಂಡ ಸಭೆ ನಡೆಸಿ ಎಲ್ಲ ವಿಚಾರಗಳನ್ನು ಚರ್ಚೆ ಮೂಲಕ ಬಗೆಹರಿಸಿಕೊಳ್ಳೋಣ ಎಂದು ಮನವಿ ಮಾಡಿದರು.

> "1987ರಿಂದ ಶ್ರೀಮಠದ ಸೇವೆ ಮಾಡುತ್ತಿದ್ದೇನೆ. ಶ್ರೀಗಳ ಹೇಳಿಕೆಯಿಂದ ತುಂಬಾ ನೋವಾಗಿದೆ. ಅವರ ಹೇಳಿಕೆಯ ಹಿಂದೆ ಕಾಣದ ಕೈವಾಡವಿದೆ ಎನ್ನುವ ಅನುಮಾನ ನಮ್ಮನ್ನು ಕಾಡುತ್ತಿದೆ."
> – ವಸಂತಗೌಡ ಪೊಲೀಸಪಾಟೀಲ, ಸೋಲ್ ಟ್ರಸ್ಟಿ, ವೀರೇಶ್ವರ ಪುಣ್ಯಾಶ್ರಮ

ಡಾ. ಪ್ರಕಾಶ ಬಸರಿಗಿಡದ ಮಾತನಾಡಿ, ಪುಣ್ಯಾಶ್ರಮದ ಆವರಣದಲ್ಲಿ ತಮ್ಮ ಪೂರ್ವಜರ ಸಮಾಧಿ ಇದ್ದು, ಅದರ ಕುರಿತು ಅನಗತ್ಯ ಆರೋಪ ಮಾಡಲಾಗುತ್ತಿದೆ. ಮಠದ ಆಸ್ತಿಗೆ ಸಂಬಂಧಿಸಿದ ಕೆಲವು ಪ್ರಕರಣಗಳು ನ್ಯಾಯಾಲಯದಲ್ಲಿ ವಿಚಾರಣೆಯಲ್ಲಿದ್ದು, ತಾವು ಯಾವುದೇ ಆಸ್ತಿ ಕಬಳಿಸುವ ಪ್ರಯತ್ನ ಮಾಡಿಲ್ಲ ಎಂದು ಸ್ಪಷ್ಟಪಡಿಸಿದರು.

ಸುದ್ದಿಗೋಷ್ಠಿಯಲ್ಲಿ ಎಂ.ಆರ್. ಹಿರೇಮಠ, ಚನ್ನಬಸಯ್ಯ ಬಂಕಾಪೂರ, ಪರಶುರಾಮ ಕಟ್ಟಿಮನಿ, ಸಂಗಮೇಶ ದುಂದೂರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಗಾಂಧಿ ಭವನ ಸ್ವಚ್ಛತೆಗೆ ನಿವೃತ್ತ ಸೈನಿಕರ ಒತ್ತಾಯ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದಲ್ಲಿ ಸಾಂಸ್ಕೃತಿಕ ಚಟುವಟಿಕೆಗಳಿಗಾಗಿ ನಿರ್ಮಿಸಲಾದ ಗಾಂಧಿ ಭವನವು ಖಾಸಗಿ ವಾಹನಗಳ ನಿಲ್ದಾಣ ಹಾಗೂ ದನಗಳನ್ನು ಕಟ್ಟುವ ಸ್ಥಳವಾಗಿ ಮಾರ್ಪಟ್ಟಿದ್ದು, ತಕ್ಷಣ ಸ್ವಚ್ಛತೆ ಕಾಪಾಡಿ ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ಸೂಕ್ತ ವಾತಾವರಣ ಕಲ್ಪಿಸಬೇಕು ಎಂದು ನಿವೃತ್ತ ಸೈನಿಕರ ಸಂಘ ಆಗ್ರಹಿಸಿದೆ.



ಸಂಘದ ಅಧ್ಯಕ್ಷ ಶಿವಪುತ್ರಪ್ಪ ಸಂಗನಾಳ ಅವರು ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿಗೆ ಮನವಿ ಸಲ್ಲಿಸಿ, ಗಾಂಧಿ ಭವನದ ಸುತ್ತಮುತ್ತ ದನಕರುಗಳ ಶಗಣಿ ಹಾಗೂ ಸಾರ್ವಜನಿಕರ ಮಲ–ಮೂತ್ರ ವಿಸರ್ಜನೆಯಿಂದ ದುರ್ವಾಸನೆ ಹರಡುತ್ತಿದ್ದು, ಅಲ್ಲಿಯೇ ಸಂಘದ ಕಚೇರಿ ಕಾರ್ಯನಿರ್ವಹಿಸುವುದರಿಂದ ಮಾಸಿಕ ಸಭೆ ನಡೆಸಲು ತೀವ್ರ ತೊಂದರೆಯಾಗುತ್ತಿದೆ ಎಂದು ತಿಳಿಸಿದ್ದಾರೆ.

ಭವನಕ್ಕೆ ಸುತ್ತಲೂ ಕಾಂಪೌಂಡ್ ಗೋಡೆ ನಿರ್ಮಿಸಿ, ಕಿಟಕಿಗಳು ಹಾಗೂ ಮುಖ್ಯ ದ್ವಾರ ಅಳವಡಿಸಿದರೆ ಜನರು ಮತ್ತು ಜಾನುವಾರುಗಳ ಹಾವಳಿ ತಡೆಯಲು ಸಾಧ್ಯವಾಗುತ್ತದೆ. ಇದರಿಂದ ಭವನದ ಸ್ವಚ್ಛತೆ ಕಾಪಾಡಿ ಸಾಂಸ್ಕೃತಿಕ ಚಟುವಟಿಕೆಗಳಿಗೆ ಅವಕಾಶ ಕಲ್ಪಿಸಬಹುದು ಎಂದು ಮನವಿಯಲ್ಲಿ ಉಲ್ಲೇಖಿಸಲಾಗಿದೆ.

ಜುಲೈ 26ರಂದು ಗಾಂಧಿ ಭವನದಲ್ಲೇ ಕಾರ್ಗಿಲ್ ವಿಜಯೋತ್ಸವ ಆಚರಿಸಲು ನಿರ್ಧರಿಸಿರುವ ಹಿನ್ನೆಲೆಯಲ್ಲಿ ಅದಕ್ಕೂ ಮುನ್ನ ಅಗತ್ಯ ಮೂಲಸೌಕರ್ಯ ಹಾಗೂ ಸ್ವಚ್ಛತಾ ವ್ಯವಸ್ಥೆ ಕಲ್ಪಿಸಬೇಕು ಎಂದು ಸಂಘ ಒತ್ತಾಯಿಸಿದೆ.

ಈ ಮನವಿಗೆ ನಿವೃತ್ತ ಸೈನಿಕರ ಸಂಘದ ಸದಸ್ಯರು ಸಹಿ ಹಾಕಿದ್ದು, ಪಟ್ಟಣ ಪಂಚಾಯಿತಿ ಶೀಘ್ರ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿದ್ದಾರೆ.

## ರಾಜ್ಯಸಭಾ ಸದಸ್ಯ ಡಾ. ನಾಗರಾಜ್‌ಗೆ ಸನ್ಮಾನ



■ ವಿಜಯಸಾಕ್ಷಿ ಸುದ್ದಿ, ಗದಗ

ಇತ್ತೀಚೆಗೆ ರಾಜ್ಯಸಭೆಯ ನೂತನ ಸದಸ್ಯರಾಗಿ ಅವಿರೋಧವಾಗಿ ಆಯ್ಕೆಯಾದ ಡಾ. ನಾಗರಾಜ್ ಅವರನ್ನು ನಗರದ ಬಿ.ಎಫ್. ದಂಡಿನ ಅವರ ನಿವಾಸದಲ್ಲಿ ಹಾಲುಮತ ಮಹಾಸಭಾ ವತಿಯಿಂದ ಸನ್ಮಾನಿಸಿ ಅಭಿನಂದಿಸಲಾಯಿತು.

ಈ ಸಂದರ್ಭದಲ್ಲಿ ಹಾಲುಮತ ಮಹಾಸಭಾ ರಾಜ್ಯಾಧ್ಯಕ್ಷ ರುದ್ರಣ್ಣ ಗುಳಗುಳಿ, ಕನಕದಾಸ ಶಿಕ್ಷಣ ಸಮಿತಿಯ ಅಧ್ಯಕ್ಷ ರವೀಂದ್ರನಾಥ ದಂಡಿನ, ಮುಖಂಡರಾದ ಸೋಮನಗೌಡ ಪಾಟೀಲ, ಬಸವರಾಜ ಕುರಿ, ರಮೇಶ ಸಜ್ಜಗಾರ, ಎಸ್.ಎಚ್. ವೆಂಕಟಾಪೂರ, ಕುಮಾರ ಮಾರನಬಸರಿ, ಸಿದ್ದು ಚೌಡಕೇರ, ಹರ್ಲಾಪೂರ ಗ್ರಾಮ ಪಂಚಾಯಿತಿ ಸದಸ್ಯ ಸಿದ್ದು ಯಳವಾಡ, ಎಸ್‌ಡಿಎಂಸಿ ಅಧ್ಯಕ್ಷ ಮುರಗೇಶ ಕೋಗಿಲೆ ಸೇರಿದಂತೆ ಹಲವರು ಉಪಸ್ಥಿತರಿದ್ದು, ಶುಭ ಹಾರೈಸಿದರು.

### ರಾಸಾಯನಿಕಯುಕ್ತ ಆಹಾರದಿಂದ ಆರೋಗ್ಯಕ್ಕೆ ಅಪಾಯ

# ವಿಷಮುಕ್ತ ಆಹಾರಕ್ಕೆ ಕೈತೋಟವೇ ಪರಿಹಾರ

■ ವಿಜಯಸಾಕ್ಷಿ ಸುದ್ದಿ, ಗದಗ

ಇಂದಿನ ಜೀವನಶೈಲಿಯಲ್ಲಿ ಮಾನಸಿಕ ಒತ್ತಡ, ಆರೋಗ್ಯ ಸಮಸ್ಯೆಗಳು ಹಾಗೂ ವಿಷಕಾರಿ ಆಹಾರದ ಬಳಕೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಪ್ರತಿಯೊಬ್ಬರೂ ತಮ್ಮ ಮನೆಯ ಪ್ರಾಂಗಣದಲ್ಲಿ ಕೈತೋಟ ನಿರ್ಮಿಸಿ ವಿಷಮುಕ್ತ ತರಕಾರಿ ಹಾಗೂ ಸೊಪ್ಪುಗಳನ್ನು ಬೆಳೆಸಿಕೊಳ್ಳಬೇಕು ಎಂದು ಬಾಗಲಕೋಟೆಯ ತೋಟಗಾರಿಕಾ ಮಹಾವಿದ್ಯಾಲಯದ ಮುಖ್ಯ ಪ್ರಾಧ್ಯಾಪಕರು ಹಾಗೂ ವಿಶೇಷಾಧಿಕಾರಿ ಡಾ. ಸತೀಶ ಆರ್. ಪಾಟೀಲ ಹೇಳಿದರು.

ನಗರದ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಸಭಾಂಗಣದಲ್ಲಿ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಮಹಿಳಾ ಘಟಕ ಹಾಗೂ ಅಕ್ಕನ ಬಳಗ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಆಯೋಜಿಸಿದ್ದ 'ಮನೆಯ ಪ್ರಾಂಗಣದಲ್ಲಿ ಕೈತೋಟ ನಿರ್ಮಾಣ' ತರಬೇತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.




ಮಾರುಕಟ್ಟೆಯಲ್ಲಿ ದೊರೆಯುವ ಅನೇಕ ತರಕಾರಿ, ಸೊಪ್ಪು ಮತ್ತು ಹಣ್ಣುಗಳಲ್ಲಿ ಅಧಿಕ ಪ್ರಮಾಣದ ಕೀಟನಾಶಕ ಹಾಗೂ ರಾಸಾಯನಿಕಗಳ ಬಳಕೆಯಿಂದ ಆರೋಗ್ಯದ ಮೇಲೆ ದುಷ್ಪರಿಣಾಮ ಉಂಟಾಗುತ್ತಿದೆ. ಮನೆಯ ಮೇಲ್ಛಾವಣಿ, ಖಾಲಿ ಜಾಗ ಅಥವಾ ಗ್ರೋ ಬ್ಯಾಗ್‌ಗಳಲ್ಲಿ ಸುಲಭವಾಗಿ ತರಕಾರಿ ಬೆಳೆಸಬಹುದು. ಬೇವಿನ ಎಣ್ಣೆ, ಮೆಣಸಿನಕಾಯಿ-ಬೆಳ್ಳುಳ್ಳಿ ಕಷಾಯ ಸೇರಿದಂತೆ ಜೈವಿಕ ಕೀಟನಾಶಕಗಳ ಬಳಕೆಯಿಂದ ರಾಸಾಯನಿಕ ಅವಲಂಬನೆ ಕಡಿಮೆ ಮಾಡಬಹುದು ಎಂದು ತಿಳಿಸಿದರು.

> "ಪ್ರತಿಯೊಂದು ಮನೆಯಲ್ಲೂ ಒಂದು ಕೈತೋಟ ನಿರ್ಮಿಸಿದರೆ ಕುಟುಂಬಕ್ಕೆ ವಿಷಮುಕ್ತ ಆಹಾರ ದೊರೆಯುವುದರ ಜೊತೆಗೆ ಆರೋಗ್ಯಕರ ಜೀವನಶೈಲಿಯೂ ರೂಢಿಯಾಗುತ್ತದೆ."
> – **ಡಾ. ಸತೀಶ ಆರ್. ಪಾಟೀಲ,** ಮುಖ್ಯ ಪ್ರಾಧ್ಯಾಪಕರು ಮತ್ತು ವಿಶೇಷಾಧಿಕಾರಿ, ತೋಟಗಾರಿಕಾ ಮಹಾವಿದ್ಯಾಲಯ, ಬಾಗಲಕೋಟೆ

ಬಾಗಲಕೋಟೆಯ ತೋಟಗಾರಿಕಾ ಮಹಾವಿದ್ಯಾಲಯದ ತರಕಾರಿ ವಿಜ್ಞಾನ ವಿಭಾಗದ ಸಹ ಪ್ರಾಧ್ಯಾಪಕ ಎಚ್.ಪಿ. ಹಾದಿಮನಿ ಮಾತನಾಡಿ, ಋತುವಿಗೆ ಅನುಗುಣವಾಗಿ ಬೆಂಡೆಕಾಯಿ, ಪಾಲಕ್, ಮೆಂತೆ, ಕೊತ್ತಂಬರಿ ಸೇರಿದಂತೆ ವಿವಿಧ ತರಕಾರಿಗಳನ್ನು ಮನೆಯಲ್ಲೇ ಬೆಳೆಸಿಕೊಳ್ಳುವುದರಿಂದ ಕುಟುಂಬದ ಆರೋಗ್ಯ ಮತ್ತು ಆಹಾರ ಭದ್ರತೆ ಕಾಪಾಡಬಹುದು ಎಂದರು.

ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಅಧ್ಯಕ್ಷ ಶರಣಬಸಪ್ಪ ಗುಡಿಮನಿ ಹಾಗೂ ಗೌರವ ಕಾರ್ಯದರ್ಶಿ ಚನ್ನವೀರಪ್ಪ ಹುಣಸಿಕಟ್ಟಿ ಮಾತನಾಡಿ, ರಾಸಾಯನಿಕಯುಕ್ತ ಆಹಾರದ ಬಳಕೆ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತಿದ್ದು, ಸಾವಯವ ಕೃಷಿ ಮತ್ತು ಸಾವಯವ ಆಹಾರದತ್ತ ಜನರು ಒಲವು ಬೆಳೆಸಿಕೊಳ್ಳಬೇಕು ಎಂದು ಹೇಳಿದರು.

ಅಕ್ಕನ ಬಳಗದ ಟ್ರಸ್ಟಿ ಅಧ್ಯಕ್ಷೆ ಕಸ್ತೂರಿ ಹಿರೇಗೌಡ್ರ ಪರಿಸರ ಸಂರಕ್ಷಣೆ ಒಂದು ದಿನಕ್ಕೆ ಸೀಮಿತವಾಗದೆ ಜೀವನದ ಭಾಗವಾಗಬೇಕು ಎಂದರು. ಮಹಿಳಾ ಘಟಕದ ಅಧ್ಯಕ್ಷೆ ಜ್ಯೋತಿ ದಾನಪ್ಪಗೌಡರ ಪ್ರಾಸ್ತಾವಿಕವಾಗಿ ಮಾತನಾಡಿ, ಮನೆಯಲ್ಲೇ ಕೈತೋಟ ನಿರ್ಮಾಣದ ಅಗತ್ಯತೆಯನ್ನು ವಿವರಿಸಿದರು.

ಕಾರ್ಯಕ್ರಮದಲ್ಲಿ ಅಕ್ಕನ ಬಳಗದ ಅಧ್ಯಕ್ಷೆ ಜಯಶ್ರೀ ಹುಬ್ಬಳ್ಳಿ, ಕಾರ್ಯದರ್ಶಿ ಜಯಶ್ರೀ ಪಾಟೀಲ, ಸುವರ್ಣಾ ಮದರಿಮಠ, ಸುವರ್ಣಾ ವಸ್ತ್ರದ, ನಾಗರತ್ನ ಹುಬ್ಬಳ್ಳಿಮಠ, ಅನ್ನಪೂರ್ಣ ಮಾಳೆಕೊಪ್ಪಮಠ, ಸುವರ್ಣಾ ಹೊಸಂಗಡಿ, ಪೂರ್ಣಿಮಾ ಆಟದ ಸೇರಿದಂತೆ ಮಹಿಳಾ ಘಟಕದ ಪದಾಧಿಕಾರಿಗಳು, ಸದಸ್ಯರು ಹಾಗೂ ಅಕ್ಕನ ಬಳಗದ ಟ್ರಸ್ಟಿಗಳು ಉಪಸ್ಥಿತರಿದ್ದರು.

### ಎಸ್‌ಎಸ್‌ಎಲ್‌ಸಿ, ಪಿಯುಸಿಯಲ್ಲಿ ಶೇ.85ಕ್ಕೂ ಹೆಚ್ಚು ಅಂಕ ಪಡೆದವರಿಗೆ ಗೌರವ

## ನಿವೃತ್ತ ಸೈನಿಕರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಬರುವ ಜುಲೈ ತಿಂಗಳ ಮಾಸಿಕ ಸಭೆಯಲ್ಲಿ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪ್ರಥಮ ಪರೀಕ್ಷೆಯಲ್ಲಿ ಶೇ.85ಕ್ಕೂ ಹೆಚ್ಚು ಅಂಕ ಪಡೆದ ನಿವೃತ್ತ ಸೈನಿಕರು ಹಾಗೂ ಪ್ಯಾರಾ ಮಿಲಿಟರಿ ಯೋಧರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ನೀಡಲಾಗುವುದು ಎಂದು ನಿವೃತ್ತ ಸೈನಿಕರ ಸಂಘದ ಅಧ್ಯಕ್ಷ ಶಿವಪುತ್ರಪ್ಪ ಸಂಗನಾಳ ಹೇಳಿದರು.




ನಿವೃತ್ತ ಸೈನಿಕರು ಮತ್ತು ಪ್ಯಾರಾ ಮಿಲಿಟರಿ ಯೋಧರ ಮಾಸಿಕ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿ, ನಿವೃತ್ತ ಸೈನಿಕರು ತಮ್ಮ ಪಿಂಚಣಿ ಹಾಗೂ ಇತರ ಸೌಲಭ್ಯಗಳಿಗಾಗಿ ಸಮೀಪದ ಎಸ್‌ಬಿಐ ಶಾಖೆಯಲ್ಲಿ ಬ್ಯಾಂಕ್ ಖಾತೆ ಹೊಂದುವಂತೆ ಸಲಹೆ ನೀಡಿದರು.

ಜುಲೈ 26ರಂದು ನಡೆಯಲಿರುವ ಕಾರ್ಗಿಲ್ ವಿಜಯೋತ್ಸವವನ್ನು ಎಲ್ಲರೂ ಕುಟುಂಬ ಸಮೇತರಾಗಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಆಚರಿಸಬೇಕು ಎಂದು ಕರೆ ನೀಡಿದರು.

> "ನಿವೃತ್ತ ಸೈನಿಕರ ಮಕ್ಕಳ ಶಿಕ್ಷಣಕ್ಕೆ ಪ್ರೋತ್ಸಾಹ ನೀಡುವುದು ನಮ್ಮ ಜವಾಬ್ದಾರಿ. ಪ್ರತಿಭಾವಂತ ವಿದ್ಯಾರ್ಥಿಗಳನ್ನು ಗೌರವಿಸುವ ಮೂಲಕ ಇನ್ನಷ್ಟು ಸಾಧನೆಗೆ ಪ್ರೇರೇಪಿಸಲಾಗುವುದು."
> – **ಶಿವಪುತ್ರಪ್ಪ ಸಂಗನಾಳ,** ಅಧ್ಯಕ್ಷರು, ನಿವೃತ್ತ ಸೈನಿಕರ ಸಂಘ

ನರೇಗಲ್ಲ ಸಿನಿಮಾ ಮಂದಿರದಿಂದ ಕೋಡಿಕೊಪ್ಪದವರೆಗೆ ನಿರ್ಮಿಸಿರುವ ಜೋಡು ರಸ್ತೆ ಅವೈಜ್ಞಾನಿಕವಾಗಿದ್ದು, ನಾಲ್ಕು ಕಡೆಯ ಎತ್ತರದಿಂದ ಅಪಘಾತಗಳು ಸಂಭವಿಸುತ್ತಿವೆ. ಉಳಿದ ಮೂರು ಕಡೆಗಳಲ್ಲಿ ರಸ್ತೆ ಇಳಿಜಾರು ಮಾಡದಿದ್ದರೆ ಒಂದು ವಾರದೊಳಗೆ ಸಂಘದ ವತಿಯಿಂದ ಪ್ರತಿಭಟನೆ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ಸಭೆಯಲ್ಲಿ ಸೇವಾ ನಿವೃತ್ತಿ ಪಡೆದ ಚಂದ್ರಶೇಖರಪ್ಪ ಹರ್ತಿ ಅವರನ್ನು ಸನ್ಮಾನಿಸಲಾಯಿತು. ಮಲ್ಲಿಕಾರ್ಜುನ ಮಲ್ಲನಗೌಡ್ರ, ಶಿವಪ್ಪ ಶಿವಾಪೂರ, ಮಂದಾಲಪ್ಪ ಸಂಗನಾಳ, ಬಸವೇಶ್ವರ ಚಿಕ್ಕೊಪ್ಪದ, ಸಂಗಪ್ಪ ಕುಷ್ಟಗಿ ಸೇರಿದಂತೆ ಸಂಘದ ಸದಸ್ಯರು ಉಪಸ್ಥಿತರಿದ್ದರು.

## ವೈದ್ಯರ ದಿನಾಚರಣೆಗೆ ಎಸ್‌ಪಿ ರೋಹನ್ ಜಗದೀಶ್‌ಗೆ ಆಹ್ವಾನ



■ ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ವೈದ್ಯಕೀಯ ಸಂಘ (ಐಎಂಎ) ಗದಗ ಘಟಕದ ಪದಾಧಿಕಾರಿಗಳು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್ ಅವರನ್ನು ಭೇಟಿ ಮಾಡಿ, 2025–26ನೇ ಸಾಲಿನ ಡಿಜಿ ಮತ್ತು ಐಜಿಪಿ ಪ್ರಶಂಸಾ ಪ್ರಶಸ್ತಿ ಲಭಿಸಿರುವ ಹಿನ್ನೆಲೆಯಲ್ಲಿ ಸನ್ಮಾನಿಸಿದರು. ಇದೇ ವೇಳೆ ಜುಲೈ 1ರಂದು ನಡೆಯಲಿರುವ ವೈದ್ಯರ ದಿನಾಚರಣೆ ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಯಾಗಿ ಭಾಗವಹಿಸುವಂತೆ ಆಹ್ವಾನಿಸಿದರು.

ಐಎಂಎ ಗದಗ ಅಧ್ಯಕ್ಷ ಡಾ. ಶ್ರೀಧರ್ ಕುರಡಗಿ, ಶತಮಾನೋತ್ಸವ ಸಮಿತಿ ಅಧ್ಯಕ್ಷ ಡಾ. ಎಸ್.ಆರ್. ನಾಗನೂರ, ಖಜಾಂಚಿ ಡಾ. ಜಯರಾಜ್, ರೆಡ್‌ಕ್ರಾಸ್ ಅಧ್ಯಕ್ಷ ಡಾ. ಗೋಡ್‌ಬೋಲೆ ಹಾಗೂ ಉಪಾಧ್ಯಕ್ಷ ಡಾ. ಪ್ಯಾರಾಲಿ ನೂರಾನಿ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ಈ ವೇಳೆ ಮಾತನಾಡಿದ ಡಾ. ಪ್ಯಾರಾಲಿ ನೂರಾನಿ, ಯುವ ಎಸ್‌ಪಿ ರೋಹನ್ ಜಗದೀಶ್ ಅವರ ಕಾರ್ಯವೈಖರಿಯನ್ನು ಶ್ಲಾಘಿಸಿದರು. ಗದಗ ಜಿಲ್ಲೆಯ ಲಕ್ಕುಂಡಿ, ಕಿಮ್ಸ್, ಶಿಕ್ಷಣ ಕ್ಷೇತ್ರ ಹಾಗೂ ಹುಲಕೋಟಿಯ ಕಿಡ್ನಿ ಕಸಿ ಸೇರಿದಂತೆ ಜಿಲ್ಲೆಯ ವಿವಿಧ ಕ್ಷೇತ್ರಗಳ ಅಭಿವೃದ್ಧಿ ಕುರಿತು ಚರ್ಚಿಸಿದರು.

ಅಲ್ಲದೆ, ಗದಗ ಶಾಸಕ ಎಚ್.ಕೆ. ಪಾಟೀಲ ಅವರಿಗೆ ಸಚಿವ ಸ್ಥಾನ ದೊರೆತು, ಅವರ ಸೇವೆ ಮತ್ತಷ್ಟು ವ್ಯಾಪಕವಾಗಿ ಜಿಲ್ಲೆಗೆ ಲಭಿಸಲಿ ಎಂದು ಆಶಯ ವ್ಯಕ್ತಪಡಿಸಿದರು.

### ಕಾನೂನು ವೃತ್ತಿ ಹಣ ಗಳಿಕೆಯ ಸಾಧನವಲ್ಲ–ಸವಿತಾ ಶಿಗ್ಲಿ

# ಕಾನೂನು ಸಮಾಜಕ್ಕೆ ನ್ಯಾಯದ ಭದ್ರ ಅಡಿಪಾಯ

■ ವಿಜಯಸಾಕ್ಷಿ ಸುದ್ದಿ, ಗದಗ

ಕಾನೂನು ಎನ್ನುವುದು ಕೇವಲ ಉದ್ಯೋಗ ಅಥವಾ ಹಣ ಗಳಿಸುವ ಸಾಧನವಲ್ಲ, ಅದು ಸಮಾಜದಲ್ಲಿ ನ್ಯಾಯ, ಸಮಾನತೆ ಹಾಗೂ ಶಾಂತಿಯನ್ನು ಕಾಪಾಡುವ ಪ್ರಮುಖ ಚೌಕಟ್ಟಾಗಿದೆ ಎಂದು ಗದಗದ ಪಬ್ಲಿಕ್ ಪ್ರಾಸಿಕ್ಯೂಟರ್ ಸವಿತಾ ಶಿಗ್ಲಿ ಹೇಳಿದರು.

ನಗರದ ಕೆ.ಎಲ್.ಇ. ಸಂಸ್ಥೆಯ ಎಸ್.ಎ. ಮಾನ್ವಿ ಕಾನೂನು ಕಾಲೇಜಿನಲ್ಲಿ ಕಾಲೇಜು ಒಕ್ಕೂಟ, ಸಾಂಸ್ಕೃತಿಕ ಹಾಗೂ ಎನ್‌ಎಸ್‌ಎಸ್ ಘಟಕಗಳ ಸಹಯೋಗದಲ್ಲಿ ಆಯೋಜಿಸಿದ್ದ ಎಲ್‌ಎಲ್‌ಬಿ ಅಂತಿಮ ವರ್ಷದ ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭದಲ್ಲಿ ಅವರು ಮಾತನಾಡಿದರು.




ಕಾನೂನು ಪದವೀಧರರು ಸಮಾಜದ ಅಸಹಾಯಕರಿಗೆ ಧ್ವನಿಯಾಗಬೇಕು. ನ್ಯಾಯವನ್ನು ಜನಸಾಮಾನ್ಯರಿಗೆ ತಲುಪಿಸುವ ಜವಾಬ್ದಾರಿಯನ್ನು ವಹಿಸಿಕೊಂಡು ವಿವಿಧ ಕ್ಷೇತ್ರಗಳಲ್ಲಿ ತಮ್ಮ ಸೇವೆ ಸಲ್ಲಿಸಬೇಕು ಎಂದು ಅವರು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯೆ ಪದ್ಮಾವತಿ ಎಚ್. ಮಾನೆ ಮಾತನಾಡಿ, ಕಾನೂನು ಮತ್ತು ನ್ಯಾಯದ ನಡುವಿನ ಅಂತರವನ್ನು ಕಡಿಮೆ ಮಾಡುವುದೇ ವಕೀಲರ ಪ್ರಮುಖ ಕರ್ತವ್ಯವಾಗಿದೆ. ತಂತ್ರಜ್ಞಾನ, ಕೃತಕ ಬುದ್ಧಿಮತ್ತೆ, ಸೈಬರ್ ಅಪರಾಧ, ಡೇಟಾ ಗೌಪ್ಯತೆ ಹಾಗೂ ಮಾನವ ಹಕ್ಕುಗಳಂತಹ ಹೊಸ ಸವಾಲುಗಳನ್ನು ಎದುರಿಸಲು ಕಾನೂನು ವಿದ್ಯಾರ್ಥಿಗಳು ಸಜ್ಜಾಗಬೇಕು ಎಂದರು.

> "ಕಾನೂನು ವೃತ್ತಿ ವೈಯಕ್ತಿಕ ಯಶಸ್ಸಿಗೆ ಮಾತ್ರ ಸೀಮಿತವಾಗಬಾರದು. ನ್ಯಾಯವನ್ನು ಜನಸಾಮಾನ್ಯರಿಗೆ ತಲುಪಿಸುವ ಸಾಮಾಜಿಕ ಹೊಣೆಗಾರಿಕೆಯನ್ನು ಪ್ರತಿಯೊಬ್ಬ ಕಾನೂನು ಪದವೀಧರರೂ ಅರಿತು ಕಾರ್ಯನಿರ್ವಹಿಸಬೇಕು."
> – **ಸವಿತಾ ಶಿಗ್ಲಿ,** ಪಬ್ಲಿಕ್ ಪ್ರಾಸಿಕ್ಯೂಟರ್, ಗದಗ

ಸ್ಥಳೀಯ ಆಡಳಿತ ಮಂಡಳಿ ಅಧ್ಯಕ್ಷ ಎಸ್.ಎ. ಮಾನ್ವಿ ಮಾತನಾಡಿ, ಉತ್ತಮ ವಕೀಲರಾಗಲು ನಿರಂತರ ಅಧ್ಯಯನದ ಮನೋಭಾವ ಅಗತ್ಯ. ಹೊಸ ಕಾನೂನುಗಳು, ನ್ಯಾಯಾಲಯಗಳ ತೀರ್ಪುಗಳು ಹಾಗೂ ಸಾಮಾಜಿಕ ಬದಲಾವಣೆಗಳನ್ನು ನಿರಂತರವಾಗಿ ಅಧ್ಯಯನ ಮಾಡುವ ಮೂಲಕ ವೃತ್ತಿಯಲ್ಲಿ ಯಶಸ್ಸು ಸಾಧಿಸಬಹುದು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಸ್ಥಳೀಯ ಆಡಳಿತ ಮಂಡಳಿ ಸದಸ್ಯ ಬಿ.ಜಿ. ಶೆಲ್ಲಿಕೇರಿ, ಪ್ರಾಚಾರ್ಯ ಡಾ. ಸಂಜೀವ್ ಹುಲ್ಲೂರ್, ಉಪನ್ಯಾಸಕರಾದ ಡಾ. ವಿಜಯ್ ವಿ. ಮುರದಂಡೆ, ಡಾ. ಜ್ಯೋತಿ ಸಿ.ವಿ., ಡಾ. ಶ್ರೀನಿವಾಸ್ ಪಾಲಕೊಂಡ, ಡಾ. ಸಿ.ಬಿ. ರಣಗಟ್ಟಿಮಠ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ರಾಜ್ಯಸಭಾ ಸದಸ್ಯರಾಗಿ ಆಯ್ಕೆಯಾದ ಡಾ. ನಾಗರಾಜ್‌ಗೆ ಸನ್ಮಾನ



■ ವಿಜಯಸಾಕ್ಷಿ ಸುದ್ದಿ, ಗದಗ

ಇತ್ತೀಚೆಗೆ ಕರ್ನಾಟಕದಿಂದ ರಾಜ್ಯಸಭಾ ಸದಸ್ಯರಾಗಿ ಅವಿರೋಧವಾಗಿ ಆಯ್ಕೆಯಾದ ಡಾ. ಎಂ. ನಾಗರಾಜ್ ಅವರನ್ನು ಅವರ ಶಿಷ್ಯಬಳಗದ ವತಿಯಿಂದ ಆತ್ಮೀಯವಾಗಿ ಸನ್ಮಾನಿಸಿ ಅಭಿನಂದಿಸಲಾಯಿತು.

ಈ ಸಂದರ್ಭದಲ್ಲಿ ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಆಯುಕ್ತ ಡಾ. ಶರಣು ಗೋಗೇರಿ, ಜಿಲ್ಲಾ ವಯಸ್ಕರ ಶಿಕ್ಷಣಾಧಿಕಾರಿ ಶಿವಕುಮಾರ ಕುರಿಯವರ, ವಿಜಯನಗರ ಪದವಿ ಪೂರ್ವ ಮಹಾವಿದ್ಯಾಲಯದ ಪ್ರಾಚಾರ್ಯ ಸಂದೀಪ ಬೂದಿಹಾಳ, ರಮೇಶ ಸಜ್ಜಗಾರ ಸೇರಿದಂತೆ ಇತರರು ಡಾ. ಎಂ. ನಾಗರಾಜ್ ಅವರಿಗೆ ಶಾಲು ಹೊದಿಸಿ, ಸನ್ಮಾನಿಸಿ ಶುಭ ಹಾರೈಸಿದರು.

ರಾಜ್ಯಸಭಾ ಸದಸ್ಯರಾಗಿ ಆಯ್ಕೆಯಾಗಿರುವ ಹಿನ್ನೆಲೆಯಲ್ಲಿ ಅವರ ಸಾರ್ವಜನಿಕ ಜೀವನ ಇನ್ನಷ್ಟು ಯಶಸ್ವಿಯಾಗಲಿ ಎಂದು ಶಿಷ್ಯಬಳಗದ ಸದಸ್ಯರು ಶುಭಾಶಯ ಕೋರಿದರು.

### ಪಂ. ದೀನದಯಾಳ ಉಪಾಧ್ಯಾಯ ಪ್ರಶಿಕ್ಷಣ ಮಹಾಭಿಯಾನ ಸಮಾರೋಪದಲ್ಲಿ ಮಾಜಿ ಸಚಿವ ಸುರೇಶ್‌ಕುಮಾರ್

# ಸಾರ್ವಜನಿಕ ಸೇವೆಯೇ ಬಿಜೆಪಿಯ ಸಂಕಲ್ಪ

■ ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಜನತಾ ಪಾರ್ಟಿ ಗದಗ ಜಿಲ್ಲಾ ಘಟಕದ ವತಿಯಿಂದ ನಗರದ ವಿಮಲ್ ರೆಸಾರ್ಟ್‌ನಲ್ಲಿ ಆಯೋಜಿಸಿದ್ದ ಪಂ. ದೀನದಯಾಳ ಉಪಾಧ್ಯಾಯ ಪ್ರಶಿಕ್ಷಣ ಮಹಾಭಿಯಾನ–2026ರ ಜಿಲ್ಲಾ ಮಟ್ಟದ ಸಮಾರೋಪ ಸಮಾರಂಭ ನಡೆಯಿತು.

ಮುಖ್ಯ ಅತಿಥಿಯಾಗಿ ಭಾಗವಹಿಸಿ ಮಾತನಾಡಿದ ಮಾಜಿ ಸಚಿವ ಹಾಗೂ ಶಾಸಕ ಸುರೇಶ್‌ಕುಮಾರ್, ಸಾರ್ವಜನಿಕ ಸೇವೆಯನ್ನೇ ಬಿಜೆಪಿ ತನ್ನ ಸಂಕಲ್ಪವನ್ನಾಗಿ ಮಾಡಿಕೊಂಡು ಕಾರ್ಯನಿರ್ವಹಿಸುತ್ತಿದೆ ಎಂದು ಹೇಳಿದರು.

ಪ್ರಧಾನಮಂತ್ರಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಜಾರಿಗೆ ತಂದಿರುವ ಪ್ರಧಾನಮಂತ್ರಿ ಆವಾಸ್, ಸ್ವನಿಧಿ, ಮುದ್ರಾ ಸೇರಿದಂತೆ ಹಲವು ಯೋಜನೆಗಳು ಕೋಟ್ಯಂತರ ಜನರ ಬದುಕಿನಲ್ಲಿ ಬದಲಾವಣೆ ತಂದಿವೆ. ಜಾಗತಿಕ ಉದ್ವಿಗ್ನತೆ, ವ್ಯಾಪಾರ ಅಡೆತಡೆ ಹಾಗೂ




ಬದಲಾಗುತ್ತಿರುವ ಪರಿಸ್ಥಿತಿಯ ನಡುವೆಯೂ ಭಾರತವು ಶಾಂತಿ, ಸ್ವಾವಲಂಬನೆ ಹಾಗೂ ಸಮಗ್ರ ಅಭಿವೃದ್ಧಿಯ ದಿಕ್ಕಿನಲ್ಲಿ ಸಾಗುತ್ತಿದೆ ಎಂದು ಹೇಳಿದರು.

ಬಿಜೆಪಿ ಜಿಲ್ಲಾ ಅಧ್ಯಕ್ಷ ತೋಟಪ್ಪ (ರಾಜು) ಕುರುಡಗಿ ಮಾತನಾಡಿ, ಪ್ರಧಾನಿ ನರೇಂದ್ರ ಮೋದಿ ಅವರು ಬಡವರ ಕಲ್ಯಾಣ ಹಾಗೂ ರೈತರ ಅಭಿವೃದ್ಧಿಗೆ ಆದ್ಯತೆ ನೀಡುತ್ತಿದ್ದಾರೆ. ರೈತರ ಸಾಂಪ್ರದಾಯಿಕ ಜ್ಞಾನ, ವಿಜ್ಞಾನದ ಶಕ್ತಿ ಹಾಗೂ ಸರ್ಕಾರದ ಬೆಂಬಲ ಒಂದಾದಾಗ ವಿಕಸಿತ ಭಾರತದ ಕನಸು ನನಸಾಗಲಿದೆ ಎಂದು ಹೇಳಿದರು. ಕಾರ್ಯಕ್ರಮ ಯಶಸ್ವಿಗೆ ಶ್ರಮಿಸಿದ ಎಲ್ಲರಿಗೂ ಅಭಿನಂದನೆ ಸಲ್ಲಿಸಿದರು.

> "ಸಾರ್ವಜನಿಕ ಸೇವೆಯೇ ಬಿಜೆಪಿಯ ಮೂಲ ಸಂಕಲ್ಪ. ಜನಪರ ಯೋಜನೆಗಳ ಮೂಲಕ ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಅಭಿವೃದ್ಧಿಯ ಫಲ ತಲುಪಿಸುವುದು ನಮ್ಮ ಗುರಿಯಾಗಿದೆ."
> **– ಸುರೇಶ್‌ಕುಮಾರ್,** ಮಾಜಿ ಸಚಿವ ಹಾಗೂ ಶಾಸಕ

ಕಾರ್ಯಕ್ರಮದಲ್ಲಿ ರಾಜ್ಯಸಭಾ ಸದಸ್ಯ ಮಾ. ನಾಗರಾಜ, ಮಾಜಿ ಸಚಿವ ಹಾಗೂ ಶಾಸಕ ಸಿ.ಸಿ. ಪಾಟೀಲ, ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ, ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ಮಾಜಿ ಸಚಿವ ಕಳಕಪ್ಪ ಜಿ. ಬಂಡಿ, ರಾಜ್ಯ ಪ್ರಶಿಕ್ಷಣ ಸಂಚಾಲಕ ನಾಗಮೂರ್ತಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಲಿಂಗರಾಜ ಪಾಟೀಲ, ಆರ್.ಕೆ. ಚವ್ಹಾಣ, ಪಕ್ಕೀರೇಶ ರಟ್ಟಿಹಳ್ಳಿ ಸೇರಿದಂತೆ ಬಿಜೆಪಿ ಪದಾಧಿಕಾರಿಗಳು ಹಾಗೂ ಪ್ರಶಿಕ್ಷಣಾರ್ಥಿಗಳು ಉಪಸ್ಥಿತರಿದ್ದರು.

### ಶಿಕ್ಷಣವು ಉದ್ಯೋಗಕ್ಕಷ್ಟೇ ಅಲ್ಲ, ವ್ಯಕ್ತಿತ್ವ ನಿರ್ಮಾಣಕ್ಕೂ ಅಡಿಪಾಯ–ಟಿ. ಈಶ್ವರ

## ಆತ್ಮಸ್ಥೈರ್ಯವೇ ವಿದ್ಯಾರ್ಥಿಗಳ ಯಶಸ್ಸಿನ ಗುಟ್ಟು

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಶಿಕ್ಷಣವು ಕೇವಲ ಉದ್ಯೋಗ ಪಡೆಯುವ ಸಾಧನವಲ್ಲ, ವ್ಯಕ್ತಿತ್ವ ನಿರ್ಮಾಣ, ಸಾಮಾಜಿಕ ಜಾಗೃತಿ ಹಾಗೂ ಉತ್ತಮ ಬದುಕಿನ ಅಡಿಪಾಯವಾಗಿದೆ ಎಂದು ಚಂದನ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಟಿ. ಈಶ್ವರ ಹೇಳಿದರು.

ಪಟ್ಟಣದ ಟಿ.ಬಿ. ಮಾನ್ವಿ ಸರ್ಕಾರಿ ಪದವಿ ಪೂರ್ವ ಮಹಾವಿದ್ಯಾಲಯದಲ್ಲಿ ಮಾನವ ಬಂಧುತ್ವ ವೇದಿಕೆ ತಾಲೂಕು ಘಟಕದ ಆಶ್ರಯದಲ್ಲಿ ಆಯೋಜಿಸಿದ್ದ ಗ್ರಾಮ ಸಂಚಾಲಕರ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.



> "ವಿದ್ಯಾರ್ಥಿಗಳ ಯಶಸ್ಸಿಗೆ ಅಂಕಗಳಿಗಿಂತ ಆತ್ಮಸ್ಥೈರ್ಯ ಮತ್ತು ಆತ್ಮವಿಶ್ವಾಸವೇ ಮುಖ್ಯ. ನಿಮ್ಮನ್ನು ನೀವೇ ನಂಬಿದರೆ ಯಾವುದೇ ಗುರಿಯನ್ನೂ ಸಾಧಿಸಬಹುದು."
> **– ಟಿ. ಈಶ್ವರ,** ಅಧ್ಯಕ್ಷರು, ಚಂದನ ಶಿಕ್ಷಣ ಸಂಸ್ಥೆ

ವಿದ್ಯಾರ್ಥಿಗಳಿಗೆ ಅಂಕಗಳಿಗಿಂತ ಆತ್ಮಸ್ಥೈರ್ಯ ಮತ್ತು ಆತ್ಮವಿಶ್ವಾಸ ಮುಖ್ಯ. 'ನಾ ಸಾಧಿಸಬಲ್ಲೆ' ಎಂಬ ನಂಬಿಕೆ, ಕೀಳರಿಮೆ ತೊರೆದು ಆಯ್ದ ಕ್ಷೇತ್ರದಲ್ಲಿ ಶ್ರದ್ಧೆ ಹಾಗೂ ಸಮರ್ಪಣಾ ಮನೋಭಾವದಿಂದ ತೊಡಗಿಸಿಕೊಂಡಾಗ ಮಾತ್ರ ಯಶಸ್ಸು ಸಾಧ್ಯವಾಗುತ್ತದೆ ಎಂದು ಹೇಳಿದರು.

ಬಂಡಾಯ ಸಾಹಿತಿ ಸಿ.ಜಿ. ಹಿರೇಮಠ ಅವರು 'ದಲಿತ ಹಾಗೂ ಪ್ರಗತಿಪರ ಚಳವಳಿ ನಡೆದು ಬಂದ ದಾರಿ' ವಿಷಯ ಕುರಿತು ಉಪನ್ಯಾಸ ನೀಡಿ, ಶೋಷಣೆರಹಿತ ಸಮಾಜ ನಿರ್ಮಾಣವೇ ಡಾ. ಅಂಬೇಡ್ಕರ್ ಅವರ ಕನಸಾಗಿತ್ತು. ಬುದ್ಧ ಹಾಗೂ ಬಸವಾದಿ ಶರಣರ ಸಮಾನತೆ ಮತ್ತು ಮಾನವೀಯ ಮೌಲ್ಯಗಳೇ ಭಾರತೀಯ ಸಂವಿಧಾನದ ತಳಹದಿಯಾಗಿವೆ ಎಂದು ತಿಳಿಸಿದರು.

ಮಾನವ ಬಂಧುತ್ವ ವೇದಿಕೆಯ ಜಿಲ್ಲಾ ಸಂಚಾಲಕ ಬಸವರಾಜ ಈರಣ್ಣವರ ವೇದಿಕೆಯ ಉದ್ದೇಶ ಹಾಗೂ ಕಾರ್ಯಚಟುವಟಿಕೆಗಳ ಕುರಿತು ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕಾಲೇಜಿನ ಪ್ರಾಚಾರ್ಯ ಮಂಜುನಾಥ ಕೊಕ್ಕರಗುಂದಿ ವಹಿಸಿದ್ದರು.

ಕಾರ್ಯಕ್ರಮದಲ್ಲಿ ಡಿ.ಬಿ. ಫಕ್ಕೀರಪ್ಪ, ರಾಜೇಶ ಕಮತದ, ರಾಜೇಶ ಭೀಮಣ್ಣವರ, ಕರಿಯಪ್ಪ ಶಿರಹಟ್ಟಿ, ಗುಡ್ಡಪ್ಪ ಮತ್ತೂರ, ರವಿ ಭಜಕ್ಕನವರ, ಹನುಮಂತಪ್ಪ ಹರಿಜನ, ಆನಂದ ತಳಗೇರಿ, ಮಾಂತೇಶ ಮುಶಪ್ಪನವರ, ಚೇತನ ಯತ್ತಿನಹಳ್ಳಿ ಸೇರಿದಂತೆ ವಿವಿಧ ಗ್ರಾಮಗಳ ಸಂಚಾಲಕರು, ಸಾಮಾಜಿಕ ಕಾರ್ಯಕರ್ತರು ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

### ಬಗರ್ ಹುಕುಂ ರೈತರು ಹಕ್ಕುಪತ್ರಕ್ಕಾಗಿ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಬೇಕು– ರವಿಕಾಂತ ಅಂಗಡಿ

# ರೈತರ ಮಕ್ಕಳಿಗೆ ಶಿಕ್ಷಣವೇ ದೊಡ್ಡ ಆಸ್ತಿ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ರೈತರು ದೇಶದ ಬೆನ್ನೆಲುಬಾಗಿದ್ದು, ಅವರ ಅಭಿವೃದ್ಧಿಯೇ ದೇಶದ ಪ್ರಗತಿಗೆ ಮೂಲವಾಗಿದೆ. ವಿಶೇಷವಾಗಿ ಬಡ ರೈತರ ಮಕ್ಕಳು ಉನ್ನತ ಶಿಕ್ಷಣ ಪಡೆದು ಉತ್ತಮ ಭವಿಷ್ಯ ರೂಪಿಸಿಕೊಳ್ಳಬೇಕು ಎಂದು ಉತ್ತರ ಕರ್ನಾಟಕ ಮಹಾಸಭಾ ರಾಜ್ಯಾಧ್ಯಕ್ಷ ಹಾಗೂ ಹೋರಾಟಗಾರ ರವಿಕಾಂತ ಅಂಗಡಿ ಹೇಳಿದರು.

ತಾಲೂಕಿನ ಕಡಕೋಳ ಗ್ರಾಮದಲ್ಲಿ ಬಗರ್ ಹುಕುಂ ರೈತರ ಸಮಸ್ಯೆಗಳ ಕುರಿತು ಆಯೋಜಿಸಿದ್ದ ಸಭೆಯಲ್ಲಿ ಅವರು ಮಾತನಾಡಿದರು.

ಹಲವು ವರ್ಷಗಳಿಂದ ಭೂಮಿ ಸಾಗುವಳಿ ಮಾಡುತ್ತಿರುವ ಬಗರ್ ಹುಕುಂ ರೈತರು ತಮ್ಮ ಜಮೀನಿನ ಹಕ್ಕುಪತ್ರ ಪಡೆಯಲು ಅಗತ್ಯ ದಾಖಲೆಗಳನ್ನು ಸಂಗ್ರಹಿಸಿ ಸರ್ಕಾರದ ಮಾರ್ಗಸೂಚಿಯಂತೆ ಸಂಬಂಧಿತ ಇಲಾಖೆಗೆ ಸಲ್ಲಿಸಬೇಕು ಎಂದು ಸಲಹೆ ನೀಡಿದರು.



ರೈತರು ತಮ್ಮ ಜಮೀನಿಗೆ ಸಂಬಂಧಿಸಿದ ದಾಖಲೆಗಳನ್ನು ಸಮರ್ಪಕವಾಗಿ ಸಂರಕ್ಷಿಸಬೇಕು. ಸರ್ಕಾರದ ವಿವಿಧ ಯೋಜನೆಗಳು ಹಾಗೂ ಸೌಲಭ್ಯಗಳ ಕುರಿತು ಮಾಹಿತಿ ಪಡೆದು, ತಮ್ಮ ಹಕ್ಕುಗಳಿಗಾಗಿ ಕಾನೂನಾತ್ಮಕ ಹೋರಾಟ ನಡೆಸುವ ಮನೋಭಾವ ಬೆಳೆಸಿಕೊಳ್ಳಬೇಕು ಎಂದರು.

> "ರೈತರ ಅಭಿವೃದ್ಧಿಯೊಂದಿಗೆ ಅವರ ಮಕ್ಕಳ ಶಿಕ್ಷಣಕ್ಕೂ ಆದ್ಯತೆ ನೀಡಬೇಕು. ಶಿಕ್ಷಣವೇ ಬಡ ರೈತರ ಕುಟುಂಬಗಳ ಭವಿಷ್ಯವನ್ನು ಬದಲಾಯಿಸುವ ದೊಡ್ಡ ಶಕ್ತಿಯಾಗಿದೆ."
> **– ರವಿಕಾಂತ ಅಂಗಡಿ,** ರಾಜ್ಯಾಧ್ಯಕ್ಷರು, ಉತ್ತರ ಕರ್ನಾಟಕ ಮಹಾಸಭಾ

ಸಭೆಯಲ್ಲಿ ರೈತರ ಅಹವಾಲುಗಳನ್ನು ಆಲಿಸಿದ ಅವರು, ಬಗರ್ ಹುಕುಂ ರೈತರಿಗೆ ನ್ಯಾಯ ದೊರಕಿಸುವ ನಿಟ್ಟಿನಲ್ಲಿ ಸರ್ಕಾರದ ಗಮನ ಸೆಳೆಯಲು ನಿರಂತರ ಹೋರಾಟ ನಡೆಸುವುದಾಗಿ ಭರವಸೆ ನೀಡಿದರು. ಉತ್ತರ ಕರ್ನಾಟಕದ ರೈತರು ನೀರಾವರಿ, ಭೂ ಹಕ್ಕು ಹಾಗೂ ಆಡಳಿತಾತ್ಮಕ ಸಮಸ್ಯೆಗಳನ್ನು ಎದುರಿಸುತ್ತಿದ್ದು, ಅವುಗಳಿಗೆ ಶಾಶ್ವತ ಪರಿಹಾರ ದೊರಕಬೇಕಾಗಿದೆ ಎಂದು ಹೇಳಿದರು.

ಶಿಕ್ಷಣದ ಮಹತ್ವವನ್ನು ಒತ್ತಿ ಹೇಳಿದ ಅವರು, ಆರ್ಥಿಕ ಸಂಕಷ್ಟಗಳ ನಡುವೆಯೂ ರೈತರು ತಮ್ಮ ಮಕ್ಕಳನ್ನು ಶಿಕ್ಷಣದಿಂದ ವಂಚಿತರನ್ನಾಗಿಸಬಾರದು. ಗ್ರಾಮೀಣ ಭಾಗದ ಮಕ್ಕಳು ವೈದ್ಯರು, ಇಂಜಿನಿಯರ್‌ಗಳು, ಆಡಳಿತಾಧಿಕಾರಿಗಳು ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಬೇಕು ಎಂದು ಆಶಯ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ರೈತರು ಭೂ ಹಕ್ಕು, ಹಕ್ಕುಪತ್ರ, ಬೆಳೆಸಾಲ ಹಾಗೂ ಸರ್ಕಾರಿ ಸೌಲಭ್ಯಗಳಿಗೆ ಸಂಬಂಧಿಸಿದ ಸಮಸ್ಯೆಗಳನ್ನು ಪ್ರಸ್ತಾಪಿಸಿದರು. ಸಂಬಂಧಿತ ಅಧಿಕಾರಿಗಳೊಂದಿಗೆ ಚರ್ಚಿಸಿ ಸಮಸ್ಯೆಗಳ ಪರಿಹಾರಕ್ಕೆ ಅಗತ್ಯ ಕ್ರಮ ಕೈಗೊಳ್ಳುವುದಾಗಿ ರವಿಕಾಂತ ಅಂಗಡಿ ತಿಳಿಸಿದರು.

ಸಭೆಯಲ್ಲಿ ಮಂಜುನಾಥ ಅರೆಪಳ್ಳಿ, ನಾಮದೇವ ಮಾಂಡ್ರೆ, ಅಂದಾನಪ್ಪ ಮುಳಗುಂದ, ಈಶ್ವರಗೌಡ ಗೌಡ್ರ, ಈಶ್ವರ ಹಿರೇಮಠ ಸೇರಿದಂತೆ ಸುಮಾರು 40ರಿಂದ 50 ರೈತರು ಭಾಗವಹಿಸಿದ್ದರು.

### ಅಬ್ಬಿಗೇರಿಯಲ್ಲಿ ತಾಲೂಕು ಮಟ್ಟದ ಮಲೇರಿಯಾ ವಿರೋಧಿ ಮಾಸಾಚರಣೆ

## ಮಲೇರಿಯಾ ಮುಕ್ತ ಸಮಾಜ ನಿರ್ಮಾಣಕ್ಕೆ ಸಹಕಾರ ಅಗತ್ಯ



■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಮಲೇರಿಯಾ ನಿರ್ಮೂಲನೆಯ ಗುರಿ ಸಮೀಪಿಸುತ್ತಿದ್ದು, ಸಾರ್ವಜನಿಕರು ಹಾಗೂ ವಿವಿಧ ಇಲಾಖೆಗಳು ಒಗ್ಗಟ್ಟಿನಿಂದ ಕಾರ್ಯನಿರ್ವಹಿಸಿದರೆ ಮಲೇರಿಯಾ ಸೇರಿದಂತೆ ಸೊಳ್ಳೆಜನ್ಯ ರೋಗಗಳನ್ನು ಸಂಪೂರ್ಣ ನಿಯಂತ್ರಿಸಲು ಸಾಧ್ಯ ಎಂದು ತಾಲೂಕು ಆರೋಗ್ಯಾಧಿಕಾರಿ ಡಾ. ಬಿ.ಎಸ್. ಭಜಂತ್ರಿ ಹೇಳಿದರು.

ಸಮೀಪದ ಅಬ್ಬಿಗೇರಿ ಗ್ರಾಮದ ಶ್ರೀ ಅನ್ನದಾನೇಶ್ವರ ವಿಜಯ ಪ್ರೌಢಶಾಲೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ರೋಗ ವಾಹಕ ಆಶ್ರಿತ ರೋಗಗಳ ನಿಯಂತ್ರಣ ಘಟಕ, ಜಿಲ್ಲಾ ಐಇಸಿ ವಿಭಾಗ, ತಾಲೂಕು ಆರೋಗ್ಯಾಧಿಕಾರಿಗಳ ಕಾರ್ಯಾಲಯ, ಪ್ರಾಥಮಿಕ ಆರೋಗ್ಯ ಕೇಂದ್ರ ಅಬ್ಬಿಗೇರಿ ಹಾಗೂ ಸಾರ್ವಜನಿಕ ಶಿಕ್ಷಣ ಇಲಾಖೆ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಿದ್ದ ತಾಲೂಕು ಮಟ್ಟದ ಮಲೇರಿಯಾ ವಿರೋಧಿ ಮಾಸಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

> "ಮನೆ ಮತ್ತು ಸುತ್ತಮುತ್ತಲಿನ ಪ್ರದೇಶವನ್ನು ಸ್ವಚ್ಛವಾಗಿಟ್ಟುಕೊಂಡು ನೀರು ನಿಲ್ಲದಂತೆ ನೋಡಿಕೊಂಡರೆ ಮಲೇರಿಯಾ ಸೇರಿದಂತೆ ಸೊಳ್ಳೆಜನ್ಯ ರೋಗಗಳನ್ನು ಪರಿಣಾಮಕಾರಿಯಾಗಿ ತಡೆಗಟ್ಟಬಹುದು."
> **– ಡಾ. ಬಿ.ಎಸ್. ಭಜಂತ್ರಿ,** ತಾಲೂಕು ಆರೋಗ್ಯಾಧಿಕಾರಿ

ಮಳೆಗಾಲದಲ್ಲಿ ನಿಂತ ನೀರಿನಿಂದ ಸೊಳ್ಳೆಗಳ ಉತ್ಪತ್ತಿ ಹೆಚ್ಚಾಗುವುದರಿಂದ ಮಲೇರಿಯಾ, ಡೆಂಗ್ಯೂ ಹಾಗೂ ಚಿಕುನ್‌ಗುನ್ಯಾ ರೋಗಗಳ ಹರಡುವಿಕೆ ಹೆಚ್ಚಾಗುತ್ತದೆ. ಆದ್ದರಿಂದ ಮನೆ ಮತ್ತು ಸುತ್ತಮುತ್ತ ನೀರು ನಿಲ್ಲದಂತೆ ನೋಡಿಕೊಳ್ಳುವುದು, ಪರಿಸರ ಸ್ವಚ್ಛತೆ ಕಾಪಾಡುವುದು ಹಾಗೂ ಸೊಳ್ಳೆಮುಕ್ತ ವಾತಾವರಣ ನಿರ್ಮಿಸುವುದು ಅತ್ಯಗತ್ಯ ಎಂದು ತಿಳಿಸಿದರು.

ಮುಖ್ಯ ಉಪನ್ಯಾಸಕಿ ಜಿಲ್ಲಾ ಕೀಟಶಾಸ್ತ್ರಜ್ಞೆ ಅನ್ನಪೂರ್ಣ ಶೆಟ್ಟರ ಮಾತನಾಡಿ, ವೈಯಕ್ತಿಕ ರಕ್ಷಣಾ ಕ್ರಮಗಳು, ಜೈವಿಕ ಹಾಗೂ ರಾಸಾಯನಿಕ ನಿಯಂತ್ರಣ ವಿಧಾನಗಳ ಮೂಲಕ ಸೊಳ್ಳೆಗಳ ನಿಯಂತ್ರಣ ಸಾಧ್ಯ. ಆರೋಗ್ಯ ಇಲಾಖೆಯ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸಿದರೆ ಮಲೇರಿಯಾ ನಿರ್ಮೂಲನೆ ಸಾಧ್ಯ ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಡಾ. ಆರ್.ಬಿ. ಬಸವರೆಡ್ಡರ ಆರೋಗ್ಯ ಇಲಾಖೆಯ ಸಲಹೆಗಳನ್ನು ಪಾಲಿಸಿ ರೋಗಮುಕ್ತ ಸಮಾಜ ನಿರ್ಮಾಣಕ್ಕೆ ಎಲ್ಲರೂ ಕೈಜೋಡಿಸಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಎಸ್.ಡಿ. ಬೆನ್ನೂರು, ವೈದ್ಯಾಧಿಕಾರಿಗಳಾದ ಡಾ. ಪ್ರಕಾಶ ಕಮತೆ, ಡಾ. ಮಹೇಶ್ ಹೊಸಕೇರಿ, ಡಾ. ನಾಗರಾಜ ಸತ್ತಿಗೇರಿ, ಶಿಕ್ಷಣ ಇಲಾಖೆಯ ಈಶ್ವರ ಕುರಿ, ಆರೋಗ್ಯ ಇಲಾಖೆಯ ಅಧಿಕಾರಿಗಳು, ಆಶಾ ಕಾರ್ಯಕರ್ತೆಯರು ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು. ಮಲೇರಿಯಾ ಹರಡುವಿಕೆ, ಮುಂಜಾಗ್ರತಾ ಕ್ರಮಗಳು ಹಾಗೂ ಸ್ವಚ್ಛತೆ ಕುರಿತು ಪ್ರಾತ್ಯಕ್ಷಿಕೆ ಮೂಲಕ ಜಾಗೃತಿ ಮೂಡಿಸಲಾಯಿತು.

### ಅರುಣೋದಯ ಶಾಲೆಯಲ್ಲಿ ಉಚಿತ ಆರೋಗ್ಯ ತಪಾಸಣಾ ಶಿಬಿರ

# ವಿಶೇಷ ಮಕ್ಕಳ ಆರೋಗ್ಯಕ್ಕೆ ಪಾಲಕರ ಜಾಗೃತಿ ಅಗತ್ಯ

■ ವಿಜಯಸಾಕ್ಷಿ ಸುದ್ದಿ, ಗದಗ

ವಿಶೇಷ ಅಗತ್ಯವುಳ್ಳ ಮಕ್ಕಳ ಸಮಗ್ರ ಆರೋಗ್ಯದ ಬಗ್ಗೆ ಪಾಲಕರು ಯಾವುದೇ ನಿರ್ಲಕ್ಷ್ಯ ತೋರಬಾರದು. ಸಕಾಲದಲ್ಲಿ ಪೌಷ್ಟಿಕ ಆಹಾರ, ನಿಯಮಿತ ವ್ಯಾಯಾಮ, ವಾಕಿಂಗ್ ಹಾಗೂ ಧ್ಯಾನವನ್ನು ರೂಢಿಸಿಕೊಟ್ಟರೆ ಮಕ್ಕಳ ದೈಹಿಕ ಮತ್ತು ಮಾನಸಿಕ ಬೆಳವಣಿಗೆಗೆ ಸಹಕಾರಿಯಾಗುತ್ತದೆ ಎಂದು ಎಲುಬು–ಕೀಲು ತಜ್ಞ ಡಾ. ಚನ್ನವೀರ ನಾಲ್ವಾಡ ಹೇಳಿದರು.

ನಗರದ ಅರುಣೋದಯ ವಿಶೇಷ ಅಗತ್ಯವುಳ್ಳ ಮಕ್ಕಳ ಶಾಲೆಯಲ್ಲಿ ಗುರುವಾರ ಆಯೋಜಿಸಿದ್ದ ಉಚಿತ ಆರೋಗ್ಯ ತಪಾಸಣಾ ಶಿಬಿರದ ಸಮಾರೋಪ ಸಮಾರಂಭದಲ್ಲಿ ಅವರು ಮಾತನಾಡಿದರು.



ವಿಶೇಷ ಮಕ್ಕಳಲ್ಲಿ ಎಲುಬು ಮತ್ತು ಕೀಲುಗಳಿಗೆ ಸಂಬಂಧಿಸಿದ ಸಮಸ್ಯೆಗಳನ್ನು ಆರಂಭಿಕ ಹಂತದಲ್ಲೇ ಗುರುತಿಸಿ ಚಿಕಿತ್ಸೆ ನೀಡಿದರೆ ಅವರ ಚಲನವಲನ ಸುಧಾರಿಸುತ್ತದೆ. ಮಕ್ಕಳ ದೇಹದ ಭಂಗಿ ಹಾಗೂ ನಡೆ–ನುಡಿಯಲ್ಲಿ ಬದಲಾವಣೆ ಕಂಡುಬಂದರೆ ತಕ್ಷಣ ತಜ್ಞ ವೈದ್ಯರನ್ನು ಸಂಪರ್ಕಿಸಬೇಕು ಎಂದು ಸಲಹೆ ನೀಡಿದರು.

ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಕಿವಿ–ಮೂಗು–ಗಂಟಲು ತಜ್ಞೆ ಡಾ. ಅಂಜಲಿ ಖೈಲಾನಿ (ನಾಲ್ವಾಡ) ಮಾತನಾಡಿ, ವಿಶೇಷ ಮಕ್ಕಳಿಗೆ ಸುಲಭವಾಗಿ ಜೀರ್ಣವಾಗುವ ಪೌಷ್ಟಿಕ ಆಹಾರ ನೀಡಬೇಕು. ಕಿವಿ, ಮೂಗು ಹಾಗೂ ಗಂಟಲಿನ ಸಮಸ್ಯೆಗಳನ್ನು ಆರಂಭದಲ್ಲೇ ಪತ್ತೆಹಚ್ಚಿ ಚಿಕಿತ್ಸೆ ನೀಡಿದರೆ ಶ್ರವಣ ಮತ್ತು ಮಾತಿನ ತೊಂದರೆಗಳನ್ನು ನಿಯಂತ್ರಿಸಬಹುದು ಎಂದರು.

ಶಿಬಿರದಲ್ಲಿ 65ಕ್ಕೂ ಹೆಚ್ಚು ವಿಶೇಷ ಮಕ್ಕಳು ಹಾಗೂ 70ಕ್ಕೂ ಹೆಚ್ಚು ಪಾಲಕರು ಆರೋಗ್ಯ ತಪಾಸಣೆಯ ಪ್ರಯೋಜನ ಪಡೆದರು. ಡಾ. ಚನ್ನವೀರ ನಾಲ್ವಾಡ, ಡಾ. ಅಂಜಲಿ ಖೈಲಾನಿ ಅವರೊಂದಿಗೆ ಫಿಜಿಯೋಥೆರಪಿಸ್ಟ್‌ಗಳಾದ ಡಾ. ರಿತ್ವಿ ಅಶೋಕ ಜೈನ್ ಹಾಗೂ ಡಾ. ಸಾಯಿ ಪ್ರಕಾಶ ಆರೋಗ್ಯ ತಪಾಸಣೆ ನಡೆಸಿ ಅಗತ್ಯ ವೈದ್ಯಕೀಯ ಹಾಗೂ ಫಿಜಿಯೋಥೆರಪಿ ಸಲಹೆ ನೀಡಿದರು.

ಶಾಲೆಯ ಆಡಳಿತ ಮಂಡಳಿ ಉಪಾಧ್ಯಕ್ಷ ಲುಕ್ಕಣಸಾ ರಾಜೋಳಿ ಮಾತನಾಡಿ, ತಜ್ಞ ವೈದ್ಯರ ತಂಡ ಶಾಲೆಗೆ ಆಗಮಿಸಿ ಮಕ್ಕಳಿಗೆ ಉಚಿತ ಆರೋಗ್ಯ ಸೇವೆ ನೀಡಿರುವುದು ಶ್ಲಾಘನೀಯ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಕಾರ್ಯದರ್ಶಿ ಜಯರಾಜ ಮುಳಗುಂದ, ಮುಖ್ಯೋಪಾಧ್ಯಾಯ ಮಲ್ಲಪ್ಪ ಹಕ್ಕಿ, ಆಡಳಿತ ಮಂಡಳಿ ಸದಸ್ಯರು, ಸಿಬ್ಬಂದಿ ಹಾಗೂ ಸ್ವಯಂಸೇವಕರು ಉಪಸ್ಥಿತರಿದ್ದರು.


### ಒಡೆಯರ್ ಮಲ್ಲಾಪುರ ವಸತಿ ಶಾಲೆಯ ವಿದ್ಯಾರ್ಥಿಗಳಿಗೆ ಕರೆ

# ನಶಾ ಮುಕ್ತ ಭಾರತಕ್ಕೆ ಕೈಜೋಡಿಸಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ನಶಾ ಮುಕ್ತ ಭಾರತ ಅಭಿಯಾನದ ಅಂಗವಾಗಿ ತಾಲೂಕಿನ ಒಡೆಯರ್ ಮಲ್ಲಾಪುರ ಗ್ರಾಮದ ಮುರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ವಿದ್ಯಾರ್ಥಿಗಳಿಗೆ ಮಾದಕ ವ್ಯಸನದ ದುಷ್ಪರಿಣಾಮಗಳ ಕುರಿತು ಜಾಗೃತಿ ಕಾರ್ಯಕ್ರಮ ನಡೆಯಿತು.

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಎಫ್.ಬಿ. ಹೂಗಾರ ಮಾತನಾಡಿ, ಕೇಂದ್ರ ಸರ್ಕಾರವು 2020ರಲ್ಲಿ ಆರಂಭಿಸಿದ ನಶಾ ಮುಕ್ತ ಭಾರತ ಅಭಿಯಾನದ ಉದ್ದೇಶ ಯುವಜನರನ್ನು ಮಾದಕ ವ್ಯಸನದಿಂದ




ದೂರವಿರಿಸಿ ಆರೋಗ್ಯವಂತ ಸಮಾಜ ನಿರ್ಮಿಸುವುದಾಗಿದೆ. ಮಾದಕ ವಸ್ತುಗಳ ದುಷ್ಪರಿಣಾಮಗಳ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದು ಹೇಳಿದರು. ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಆರ್.ವಿ. ಗುರಣ್ಣವರ ಮಾತನಾಡಿ, ವಿದ್ಯಾರ್ಥಿಗಳು ತಮ್ಮ ಕುಟುಂಬ ಹಾಗೂ ಸಮಾಜದಲ್ಲಿ ತಂಬಾಕು, ಮದ್ಯಪಾನ, ಧೂಮಪಾನ ಮತ್ತು ಇತರ ಮಾದಕ ವಸ್ತುಗಳ ದುಷ್ಪರಿಣಾಮಗಳ ಬಗ್ಗೆ ಜಾಗೃತಿ ಮೂಡಿಸಬೇಕು ಎಂದು ಕರೆ ನೀಡಿದರು. ಶಾಲೆಯ ಪ್ರಾಚಾರ್ಯ ನಾಗರಾಜ ಕಳಸಾಪುರ ಅಧ್ಯಕ್ಷತೆ ವಹಿಸಿ, ಆರೋಗ್ಯಕರ ಸಮಾಜ ನಿರ್ಮಾಣಕ್ಕೆ ಪ್ರತಿಯೊಬ್ಬರೂ ಕೈಜೋಡಿಸಿ ನಶಾ ಮುಕ್ತ ಭಾರತ ನಿರ್ಮಾಣಕ್ಕೆ ಮುಂದಾಗಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಎಫ್.ಸಿ. ಹೊಸಮಠ, ಶಾಲೆಯ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka